ಸಂಪುಟ : 11 ಸಂಚಿಕೆ: 15 ಪುಟ : 4+2 ಬೆಲೆ: 3.00 ಬುಧವಾರ ಫೆಬ್ರವರಿ 11 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ





Volume : 11 Issue : 15 Pages : 4+2 Price : 3.00 Wednesday February 11 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕಾನೂನು ಸಮರದಲ್ಲಿ ಬಿಜೆಪಿ ಸದಸ್ಯರಿಗೆ ಹಿನ್ನಡೆ । ಸದಸ್ಯರ ಅಮಾನತು ಎತ್ತಿ ಹಿಡಿದ ಉಚ್ಚ ನ್ಯಾಯಾಲಯ

# ಬಿಜೆಪಿಯ ಅಧಿಕಾರದ ಕನಸಿನ ಬಣ್ಣ ಅಳಿಸಿದ ಹೈಕೋರ್ಟ್










■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಾದ್ಯಂತ ತೀವ್ರ ಕುತೂಹಲ ಕೆರಳಿಸಿದ್ದ ನಕಲಿ ಠರಾವು ಪ್ರಕರಣಕ್ಕೆ ಸಂಬಂಧಿಸಿದಂತೆ ಗದಗ-ಬೆಟಗೇರಿ ನಗರಸಭೆಯ ಮೂವರು ಬಿಜೆಪಿ ಸದಸ್ಯರ ಅಮಾನತು ಆದೇಶವನ್ನು ಹೈಕೋರ್ಟ್ ಎತ್ತಿ ಹಿಡಿದಿದೆ.

ನಕಲಿ ಠರಾವು ಸೃಷ್ಟಿಸಿ ಸಾವಿರಾರು ಕೋಟಿ ರೂ ಬೆಲೆಬಾಳುವ 34 ಎಕರೆ ವಕಾರಸಾಲು ಲೀಸ್ ಅವಧಿ ವಿಸ್ತರಣೆ ವಿಷಯವಾಗಿ ಕೈಗೊಂಡ ಠರಾವು ನಕಲಿ ಎಂದು ಸಾಬೀತಾದ ಹಿನ್ನೆಲೆಯಲ್ಲಿ ಬೆಳಗಾವಿ ಪ್ರಾದೇಶಿಕ ಆಯುಕ್ತರು ಮೂವರು ಸದಸ್ಯರನ್ನು ಅಮಾನತು ಮಾಡಿ ಆದೇಶಿಸಿದ್ದರು.

ಅಮಾನತು ಆದೇಶ ಪ್ರಶ್ನಿಸಿ ಮೂವರು ಸದಸ್ಯರು ಹೈಕೋರ್ಟ್ ಮೆಟ್ಟಿಲೇರಿದ್ದರು. ಧಾರವಾಡ ಪೀಠದಲ್ಲಿದ್ದ ಈ ಮಹತ್ವದ ಪ್ರಕರಣವನ್ನು ಮಂಗಳವಾರ ಬೆಂಗಳೂರಿನ ಹೈಕೋರ್ಟ್ ಪೀಠದಲ್ಲಿ ವಿಚಾರಣೆಗೆ ಕೈಗೆತ್ತಿಕೊಳ್ಳಲಾಯಿತು. ಸಮಗ್ರ ವಿಚಾರಣೆ ನಡೆಸಿದ ಹೈಕೋರ್ಟ್, ಬೆಳಗಾವಿ ಪ್ರಾದೇಶಿಕ ಆಯುಕ್ತ ಎಸ್.ಬಿ. ಶೆಟ್ಟೆಣ್ಣವರ ನೀಡಿರುವ ಆದೇಶವನ್ನು ಎತ್ತಿ ಹಿಡಿಯಿತಲ್ಲದೆ, ಬಿಜೆಪಿಯ ಅಧಿಕಾರದ ಕನಸಿನ ಬಣ್ಣ ಅಳಿಸಿದೆ.

ಈ ನಕಲಿ ದಾಖಲೆಗಳಲ್ಲಿ ಪೌರಾಯುಕ್ತರ ಸಹಿಯನ್ನು ನಕಲು ಮಾಡಿ, ಆರೋಪಿತ ಸದಸ್ಯರು ಸಹಿ ಮಾಡಿರುವುದು ಮೇಲ್ನೋಟಕ್ಕೆ ಸಾಬೀತಾಗಿತ್ತು. ಈ ಹಿನ್ನೆಲೆಯಲ್ಲಿ ಬೆಳಗಾವಿ ಪ್ರಾದೇಶಿಕ ಆಯುಕ್ತರಾದ ಎಸ್.ಬಿ. ಶೆಟ್ಟೆಣ್ಣವರ, 2025 ಫೆಬ್ರವರಿ 13ರಂದು ನಗರಸಭೆ ಬಿಜೆಪಿ ಸದಸ್ಯರಾದ ಉಷಾ ದಾಸರ, ಅನಿಲ ಅಬ್ಬಿಗೇರಿ ಮತ್ತು ಗೂಳಪ್ಪ ಮುಷಿಗೇರಿ ಅವರ ಸದಸ್ಯತ್ವವನ್ನು ರದ್ದುಗೊಳಿಸಿ ಆದೇಶಿಸಿದ್ದರು.

ಗದಗ-ಬೆಟಗೇರಿ ನಗರಸಭೆಯ ರಾಜಕೀಯ ಇತಿಹಾಸದಲ್ಲಿ ಬಿಜೆಪಿಗೆ 2ನೇ ಅವಧಿ ಯಾವಾಗಲೂ ಮರೀಚಿಕೆಯಾಗಿಯೇ ಉಳಿದಿದೆ. ಕಾಂಗ್ರೆಸ್ ಭದ್ರಕೋಟೆಯಾಗಿದ್ದ ಗದಗ ಬೆಟಗೇರಿ ನಗರಸಭೆಯಲ್ಲಿ ಮೊಟ್ಟ ಮೊದಲ ಬಾರಿಗೆ 2008ರಲ್ಲಿ ಬಿಜೆಪಿ ಅಧಿಕಾರಕ್ಕೇರಿ 30 ತಿಂಗಳು ಆಡಳಿತ ನಡೆಸಿತ್ತು. ಆದರೆ 2ನೇ ಅವಧಿಯ ವೇಳೆ ಕಾಂಗ್ರೆಸ್‌ನ ಶಿವಣ್ಣ ಮುಳಗುಂದ ಅವರು 6 ಜನ ಬಿಜೆಪಿ ಸದಸ್ಯರನ್ನೇ ಸೆಳೆದುಕೊಂಡು ಅಧಿಕಾರ ಹೈಜಾಕ್ ಮಾಡಿದ್ದರು. ಸದ್ಯ 2022ರಲ್ಲಿ ಮತ್ತೆ ಅಧಿಕಾರಕ್ಕೆ ಬಂದ ಬಿಜೆಪಿ ಮೊದಲ ಅವಧಿಯನ್ನು ಪೂರೈಸಿತು. ಆದರೆ 2ನೇ ಅವಧಿ ವೇಳೆಗೆ ಈ ನಕಲಿ ಠರಾವು ಪ್ರಕರಣದಿಂದಾಗಿ ಬಿಜೆಪಿ ಅಧಿಕಾರ ಕಳೆದುಕೊಳ್ಳುವಂತಾಯಿತು.

ಬಿಜೆಪಿಯ ಮೂವರು ಸದಸ್ಯರು ನಡೆಸುತ್ತಿರುವ ಕಾನೂನು ಹೋರಾಟದಲ್ಲಿ ಸತತವಾಗಿ ಹಿನ್ನಡೆ ಅನುಭವಿಸುತ್ತಲೇ ಬಂದಿದ್ದಾರೆ. ನಕಲಿ ಠರಾವು ವಿಷಯವಾಗಿ ದಾಖಲಾಗಿದ್ದ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ರದ್ದುಗೊಳಿಸಿತ್ತು. ಈಗ ಮತ್ತೊಮ್ಮೆ ಹೈಕೋರ್ಟ್ ಏಕಸದಸ್ಯ ಪೀಠದ ಈ ಆದೇಶವು ಬಿಜೆಪಿಗೆ ದೊಡ್ಡ ಹೊಡೆತ ನೀಡಿದ್ದರೂ, ಕಾನೂನು ಹೋರಾಟ ಇಲ್ಲಿಗೆ ಅಂತ್ಯಗೊಂಡಿಲ್ಲ. ಏಕಸದಸ್ಯ ಪೀಠದ ಈ ತೀರ್ಪನ್ನು ಪ್ರಶ್ನಿಸಿ ಬಿಜೆಪಿ ಸದಸ್ಯರು ಹೈಕೋರ್ಟ್‌ನ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸುವ ಸಾಧ್ಯತೆಯಿದೆ. ಆ ಮೂಲಕ ಬಿಜೆಪಿ ಮತ್ತೊಮ್ಮೆ ಅಧಿಕಾರಕ್ಕೆ ಬರದಿದ್ದರೂ, ಇನ್ನುಳಿದ ಅವಧಿಗೆ ಕಾಂಗ್ರೆಸ್ ಅಧಿಕಾರಕ್ಕೆ ಏರದಂತೆ ಹೋರಾಟ ನಡೆಸುವ ಚಿಂತನೆಯಲ್ಲಿದೆ ಎನ್ನಲಾಗಿದೆ.

> ಬೆಳಗಾವಿ ಪ್ರಾದೇಶಿಕ ಆಯುಕ್ತರು ಮೂವರು ಸದಸ್ಯರನ್ನು ಅಮಾನತು ಮಾಡಿರುವ ಪ್ರಕರಣದ ಜೊತೆಗೆ, ನ್ಯಾಯಾಲಯದ ಆದೇಶವನ್ನು ಮೀರಿ ಚುನಾವಣಾ ಅಧಿಕಾರಿಗಳು ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆ ನಡೆಸಿದ್ದಾರೆ ಎನ್ನಲಾದ ಪ್ರಕರಣದ ವಿಚಾರಣೆ ಬಾಕಿ ಇದೆ. ಹಿಂದಿನ ಪೌರಾಯುಕ್ತ ಪ್ರಶಾಂತ ವರಗಪ್ಪನವರ ಅವರು ಠರಾವಿನಲ್ಲಿರುವ ತಮ್ಮ ಸಹಿ ನಕಲಿಯಾಗಿದೆ ಎಂದು ಆರೋಪಿಸಿ ದಾಖಲಿಸಿರುವ ಎಫ್‌ಐಆರ್ ಪ್ರಕರಣವೂ ವಿಚಾರಣೆಯ ಹಂತದಲ್ಲಿದೆ. ಹೀಗಾಗಿ, ಹೈಕೋರ್ಟ್‌ನ ಸದರಿ ತೀರ್ಪಿನ ಹೊರತಾಗಿಯೂ ಗದಗ ನಗರಸಭೆಯ ಅಧಿಕಾರಕ್ಕಾಗಿ ನಡೆಯುತ್ತಿರುವ ಗುದ್ದಾಟ ಮುಂದುವರೆಯಲಿದೆ.

# ಇಂದು ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಲಕ್ಷ್ಮೇಶ್ವರ ಹಾಗೂ 110 ಕೆವ್ಹಿ ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಫೆ. 11ರಂದು ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯುವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಲಕ್ಷ್ಮೇಶ್ವರ ಹಾಗೂ 110 ಕೆವ್ಹಿ ಬೆಳ್ಳಟ್ಟಿ ಉಪಕೇಂದ್ರಗಳಿಂದ ಪೂರೈಕೆಯಾಗುವ 110 ಕೆವ್ಹಿ ಬೆಳ್ಳಟ್ಟಿ-ಬಾಗೇವಾಡಿ ವಿದ್ಯುತ್ ಮಾರ್ಗ, 33 ಕೆವ್ಹಿ ಎಮ್.ಎಮ್.ಸಿ.ಎಲ್ ಗಾಳಿಯಂತ್ರ ಘಟಕ ಮತ್ತು 33 ಕೆವ್ಹಿ ಸೊಮೆಶ್ವರ ಸ್ಪಿನ್ನಿಂಗ್ ಮಿಲ್, ಸೋಲಾರ್-1, ಸೋಲಾರ್-2 ಹಾಗೂ 110 ಕೆವ್ಹಿ ಎನಾರಕಾನ, 110 ಕೆವ್ಹಿ ಆದಿತ್ಯ ಬಿರ್ಲಾ ಸೋಲಾರ್, 33 ಕೆವ್ಹಿ ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33 ಕೆವ್ಹಿ ಸೂರಣಗಿ ಉಪಕೇಂದ್ರ ಮತ್ತು 33 ಕೆವ್ಹಿ ಹೊಳೆಇಟಗಿ ಉಪಕೇಂದ್ರಗಳಿಂದ ಪೂರೈಸ್ಪಡುವ ಎಲ್ಲಾ ನಗರ, ಕೈಗಾರಿಕಾ, ಕುಡಿಯುವ ನೀರು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಹೆಸ್ಕಾಂನೊಂದಿಗೆ ಸಹಕರಿಸಬೇಕಾಗಿ ವಿನಂತಿಸಿದೆ.

### ಕಾಯಕ ಶರಣರ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ

# ನಿಸ್ವಾರ್ಥ ಕಾಯಕವೇ ಶರಣತ್ವದ ದಾರಿ

■ ವಿಜಯಸಾಕ್ಷಿ ಸುದ್ದಿ, ಗದಗ




ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಕಾಯಕ ಶರಣರಾದ ಶರಣ ಮಾದಾರ ಚೆನ್ನಯ್ಯ, ಶರಣ ಸಮಗಾರ ಹರಳಯ್ಯ ಹಾಗೂ ಶರಣ ಡೋಹರ ಕಕ್ಕಯ್ಯನವರ ಜಯಂತಿ ಕಾರ್ಯಕ್ರಮ ಮಂಗಳವಾರ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಗೌರವಪೂರ್ವಕವಾಗಿ ಜರುಗಿತು.

ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಚಾಲನೆ ನೀಡಿ ಮಾತನಾಡಿ, ನಿಸ್ವಾರ್ಥ ಕಾಯಕ ಮಾಡುವವರೇ ನಿಜವಾದ ಶರಣರು. ನಾನು-ನಾನು ಎಂಬ ಅಹಂಕಾರದಿಂದ ಹೊರಬಂದಾಗಲೇ ಶರಣತ್ವ ಸಾಧ್ಯ. ಶರಣರು ತೋರಿಸಿದ ಸಾಧನೆಯ ದಾರಿಯಲ್ಲಿ ಸಾಗುವುದು ನಮ್ಮೆಲ್ಲರ ಕರ್ತವ್ಯ ಎಂದರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ ಕಾಯಕ ಶರಣರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ ಜಯಂತಿಗೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನೀಯರನ್ನು ಜಿಲ್ಲಾಡಳಿತ ವತಿಯಿಂದ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಕೆ.ಆರ್. ದುರಗೇಶ್, ಸಹಾಯಕ ಆಯುಕ್ತ ಗಂಗಪ್ಪ, ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ತಹಸೀಲ್ದಾರ್ ಶ್ರೀನಿವಾಸ್ ಮೂರ್ತಿ, ಜಾನಪದ ಅಕಾಡೆಮಿ ಸದಸ್ಯ ಶಂಕ್ರಣ್ಣ ಸಂಕಣ್ಣನವರ, ಎಸ್.ಎನ್. ಬಳ್ಳಾರಿ, ಶರೀಫ್ ಬಿಳಿಯಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಶರಣತತ್ವ ಚಿಂತಕ ಅಶೋಕ ಬರಗುಂಡಿ ಉಪನ್ಯಾಸ ನೀಡಿ, ಕಾಯಕವನ್ನು ಕೇವಲ ದುಡಿಮೆಯ ಮಟ್ಟಕ್ಕೆ ಸೀಮಿತಗೊಳಿಸಬಾರದು, ಅದು ಆಧ್ಯಾತ್ಮಿಕ ಸಾಧನೆಯ ದಾರಿಯಾಗಿದೆ. 12ನೇ ಶತಮಾನದಲ್ಲೇ ಶರಣರು ವೃತ್ತಿಗೆ ಗೌರವ ನೀಡುವ ಮೂಲಕ ಶ್ರೇಣೀಕೃತ ವ್ಯವಸ್ಥೆಗೆ ಸವಾಲು ಹಾಕಿದರು. ದುಡಿಯುವವನೇ ದೇವರು ಎಂಬ ತತ್ವವನ್ನು ಅವರು ಜೀವನದ ಮೂಲಕ ಸಾರಿದರು. ಶರಣರು ಜಾತಿ, ಧರ್ಮಗಳ ಗಡಿಗಳನ್ನು ಮೀರಿ ಚೈತನ್ಯವೇ ಮೂಲಸ್ವರೂಪ ಎಂದು ಸಾರಿದ್ದು, ಅವರ ತತ್ವ ಇಂದಿಗೂ ಸಮಾಜಕ್ಕೆ ದಿಕ್ಕು ತೋರುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

# ಸಾಧಕರಿಗೆ ಪ್ರಶಸ್ತಿ ಪ್ರದಾನ, ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಶ್ರೀ ಡಾ. ಪಂಡಿತ ಪುಟ್ಟರಾಜ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಎಂ.ಪಿ. ಮುಳಗುಂದ ನೇತೃತ್ವದ ಸಂಘದ 5ನೇ ವಾರ್ಷಿಕೋತ್ಸವ ಕಾರ್ಯಕ್ರಮದ ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಜರುಗಿತು.

ಸಮಾರಂಭದಲ್ಲಿ ಪರಮಪೂಜ್ಯ ಶ್ರೀ ಮ.ನಿ.ಪ್ರ ಜಗದ್ಗುರು ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳಿಗೆ 'ಶ್ರೀ ಭಾವಸಂಗಮ' ಪ್ರಶಸ್ತಿ, ಪರಮಪೂಜ್ಯ ಡಾ. ಶ್ರೀ ಕಲ್ಲಯ್ಯಜ್ಜನವರಿಗೆ 'ಶ್ರೀ ಗುರುಕಾರುಣ್ಯ' ಪ್ರಶಸ್ತಿ, ಶ್ರೀ ಮ.ನಿ.ಪ್ರ ಅಭಿನವ ಡಾ. ಕೋಟೇಶ್ವರ ಮಹಾಸ್ವಾಮಿಗಳಿಗೆ 'ಶ್ರೀ ಧರ್ಮಸಾಗರ' ಪ್ರಶಸ್ತಿ, ಶ್ರೀ ಪೂ. ಬ್ರ. ಶ್ರೀ ಫಕೀರೇಶ್ವರ ಸ್ವಾಮಿಗಳಿಗೆ 'ಶ್ರೀ ಭಾವೈಕ್ಯ' ಪ್ರಶಸ್ತಿ, ಸದ್ಗುರು ಡಾ. ಅಬ್ಬಾಸಲಿ ತಾತನವರಿಗೆ 'ಭಾವೈಕ್ಯ ನಿಧಿ' ಪ್ರಶಸ್ತಿ, ಎಸ್. ಎನ್. ಬಳ್ಳಾರಿ ಇವರಿಗೆ ರಾಜ್ಯ ಪ್ರಶಸ್ತಿ, ಟಿವಿ ಚಾನೆಲ್ ಸಂಪಾದಕ ಸಯ್ಯದ್ ಜವಾರಿ, ಅಯೂಬ್ ಪುಣೆಕಾರ ಬಾಗಲಕೋಟ, ಡಾ. ಶ್ರೀನಿವಾಸಮೂರ್ತಿ, ರಾಜಕುಮಾರ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಇವರುಗಳಿಗೆ ರಾಜ್ಯ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಬಸವರಾಜ ವಡ್ಡರ, ಬಸವರಾಜ ನವಲಗುಂದ, ಮಂಜಪ್ಪ ಬುರ್ಲಿ, ಪಕೀರಪ್ಪ ಹಣಜಿ, ಹಾಲಪ್ಪ ಹಂಪಣ್ಣ ಹೋಲಿ, ಫಕೀರಪ್ಪ ಕುಲನೂರು, ಧನರಾಜ್ ಹೂಗಾರ, ಕ್ಯಾತಪ್ಪ ತಳವಾರ್, ಶಿವು ನಿಂಗಪ್ಪ ಇಸರಡ್ಡಿ, ಮಹಾಂತೇಶ ಈರಯ್ಯ ಕಳ್ಳಿಮಠ, ಆಶಾ ಕಟ್ಟಿಮನಿ, ಮಂಜುಳಾ ರಾಠೋಡ, ರೇಷ್ಮಾ ಔರಂಗಭಾಷ ಅಂಗಡಿ, ಮಾಲಾ ಹ.ಕೇರಿ ಉಪಸ್ಥಿತರಿದ್ದರು.

### ಗ್ರಾಮೀಣ ಭಾಗದಲ್ಲಿ ಆಟೋದಲ್ಲಿ ಪಡಿತರ ಅಕ್ಕಿ ಅಕ್ರಮ ಸಾಗಾಟ ದಂಧೆ

# ಮಧ್ಯವರ್ತಿಗಳ ಕಿಸೆ ತುಂಬುತ್ತಿದೆ ಅನ್ನಭಾಗ್ಯ ಅಕ್ಕಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ಪೊಲೀಸ್ ಠಾಣೆ ವ್ಯಾಪ್ತಿಯ ನೀಲಗುಂದ ಗ್ರಾಮದಲ್ಲಿ ಅಕ್ರಮವಾಗಿ ಅಕ್ಕಿ ದಂಧೆ ರಾಜಾರೋಷವಾಗಿ ನಡೆದಿದ್ದು, ಈ ಬಗ್ಗೆ ಪೊಲೀಸರಿಗೆ ವಿಷಯ ತಿಳಿಸಿದರೂ ಯಾವದೇ ಕ್ರಮ ಕೈಗೊಳ್ಳದಿರುವದು ಅನುಮಾನಕ್ಕೆ ಕಾರಣವಾಗಿದೆ.



ಗ್ರಾಮೀಣ ಭಾಗದಲ್ಲಿ ದಂಧೆಕೋರರು ಪಡಿತರ ಅಕ್ಕಿಯನ್ನು ಅಕ್ರಮವಾಗಿ ತುಂಬಿಸಿಕೊಂಡು ನೀಲಗುಂದ, ಮಲ್ಲಿಗವಾಡ ರಸ್ತೆ ಮಾರ್ಗವಾಗಿ ಅಣ್ಣಿಗೇರಿ, ಹುಬ್ಬಳ್ಳಿಗೆ ರಾಜಾರೋಷವಾಗಿ ಕಳ್ಳ ಸಾಗಾಣೆ ಮಾಡುತ್ತಿರುವದನ್ನು ಕಂಡು ಪ್ರಶ್ನಿಸಿದ ಸಾರ್ವಜನಿಕರಿಗೆ ದಂಧೆಕೋರರು ಬೆದರಿಕೆ ಹಾಕಿ ಮುಂದೆ ಸಾಗಿದ್ದಾರೆ. ಒಂದು ಹೊತ್ತಿನ ಊಟವಿಲ್ಲದೇ ಯಾರೂ ಇರಬಾರದು ಎಂಬ ದೃಷ್ಟಿಯಿಂದ ಸರ್ಕಾರ ಬಡ, ಮಧ್ಯಮ ವರ್ಗದವರಿಗೆ ಅನ್ನಭಾಗ್ಯ ಯೋಜನೆಯಲ್ಲಿ ನೀಡುವ ಅಕ್ಕಿಯೂ ದಂಧೆಕೋರರ, ಮಧ್ಯವರ್ತಿಗಳ ಪಾಲಾಗುತ್ತಿದ್ದು, ಅಧಿಕಾರಿಗಳು ಕಂಡರೂ ಕಾಣದಂತೆ ಕಣ್ಮುಚ್ಚಿ ಕುಳಿತ್ತಿದ್ದಾರೆ.

ಗ್ರಾಮೀಣ ಭಾಗದಲ್ಲಿ ಅಕ್ಕಿ ಅಕ್ರಮ ಸಾಗಾಟ ದಂಧೆ ಹೆಚ್ಚಾಗಿದ್ದು, ಮನೆ ಮನೆಗೆ ತೆರಳಿ ಕಡಿಮೆ ಬೆಲೆಗೆ ಅಕ್ಕಿಯನ್ನು ಖರೀದಿಸಿ, ಹೆಚ್ಚಿನ ಲಾಭಾಂಶಕ್ಕೆ ಮಾರಾಟ ಮಾಡುವ ದಂಧೆಕೋರರು ಯಾರ ಭಯವೂ ಇಲ್ಲದೇ ಪ್ಯಾಸೆಂಜರ್ ಆಟೋದಲ್ಲಿ 10-15 ಕ್ವಿಂಟಲ್ ಅಕ್ರಮ ಅಕ್ಕಿಯನ್ನು ತುಂಬಿಸಿಕೊಂಡು ಸಾಗಾಟ ಮಾಡುತ್ತಿದ್ದಾರೆ. ಈ ಬಗ್ಗೆ ಪ್ರಶ್ನಿಸಿದ ಸಾರ್ವಜನಿಕರಿಗೆ ಅಧಿಕಾರಿಗಳಿಗೆ ತಿಂಗಳ ಮಾಮೂಲಿ ಕೊಡುತ್ತೇವೆ. ನಾವೇಕೆ ಹೆದರಬೇಕೆಂದು ಸಾರ್ವಜನಿಕರ ಮೇಲೆಯೇ ಬೆದರಿಕೆ ಹಾಕುತ್ತಿದ್ದಾರೆ ಎನ್ನಲಾಗಿದೆ


ಅಧಿಕಾರಿಗಳೇ ಇಂತಹ ದಂಧೆಕೋರರ ರಕ್ಷಣೆಗೆ ನಿಂತಾಗ ಸರ್ಕಾರದ ಯೋಜನೆಗಳ ಗುರಿ ತಪ್ಪುತ್ತಿದೆ, ಬೇಲಿಯೇ ಎದ್ದು ಹೊಲ ಮೇಯ್ದಂತಾಗುತ್ತಿದೆ. ಸಂಬಂಧಪಟ್ಟ ಅಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಅಕ್ರಮ ಅಕ್ಕಿ ಮಾರಾಟ ದಂಧೆ ನಡೆಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

> ನಾನು ಕಳೆದ ವಾರ ಗದುಗಿಗೆ ವರ್ಗಾವಣೆಯಾಗಿ ಬಂದಿದ್ದು, ಪಡಿತರ ಅಕ್ರಮ ಸಾಗಾಟದ ಬಗ್ಗೆ ಎಲ್ಲ ಅಧಿಕಾರಿಗಳಿಗೂ ನಿರ್ದೇಶನ ಕೊಟ್ಟಿದ್ದೇನೆ. ಬೆಳದಡಿಯಲ್ಲಿ ನಿನ್ನೆ ಒಂದು ಪ್ರಕರಣ ದಾಖಲಾಗಿದೆ. ಸಾಗಾಟದ ಸಂದರ್ಭದಲ್ಲಿ ಯಾರಾದರೂ ಮಾಹಿತಿ ನೀಡಿದರೆ ತಕ್ಷಣ ಕಾರ್ಯಪ್ರವೃತ್ತರಾಗುತ್ತೇವೆ.
>
> **- ಎಸ್.ಡಿ. ಪಾಟೀಲ.**
> ಆಹಾರ ಇಲಾಖೆ ಉಪನಿರ್ದೇಶಕರು, ಗದಗ.

> ಗ್ರಾಮದಲ್ಲಿ ಈ ಅಕ್ರಮ ಪಡಿತರ ದಂಧೆ ಹಲವು ವರ್ಷಗಳಿಂದಲೂ ನಡೆದಿದ್ದು, ನಗರಗಳಿಂದ ಗ್ರಾಮೀಣ ಭಾಗಕ್ಕೆ ಬಂದು ಮನೆಗಳಿಗೆ ತೆರಳಿ ಕಡಿಮೆ ಬೆಲೆಗೆ ಅಕ್ಕಿ ಖರೀದಿಸುತ್ತಿದ್ದಾರೆ. ಆದರೆ ಈ ಬಗ್ಗೆ ತಾಲೂಕು ಮಟ್ಟದ ಅಧಿಕಾರಿಗಳಿಗೆ ಮಾಹಿತಿ ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಇದರಲ್ಲಿ ಸಣ್ಣ ಅಧಿಕಾರಿಗಳಿಂದ ಹಿಡಿದು ಜಿಲ್ಲಾ ಮಟ್ಟದ ಅಧಿಕಾರಿಗಳೂ ಭಾಗಿಯಾಗಿರುವ ಅನುಮಾನವಿದ್ದು, ಯಾವದೇ ಕ್ರಮಕ್ಕೆ ಮುಂದಾಗುತ್ತಿಲ್ಲ.
>
> **- ರವಿ ವಗ್ಗನವರ.**
> ಸಾಮಾಜಿಕ ಕಾರ್ಯಕರ್ತ, ನೀಲಗುಂದ.

### ಸತಿ-ಪತಿಗಳಿಬ್ಬರೂ ಇಚ್ಛಾಮರಣ ಕಂಡ ಪುಣ್ಯಭೂಮಿ!

# ಶಿಗ್ಲಿಯಲ್ಲಿ ಶರಣ ಸಂಸ್ಕೃತಿಯ 'ಕೈಲಾಸ' ಸಂಭ್ರಮ




"ಯಾರ ಬಳಿಯೂ ಕಾಣಿಕೆ ಕೇಳದೆ, ಸ್ವಂತ ಕಾಯಕದ ಗಳಿಕೆಯಲ್ಲೇ ದಾಸೋಹ ನಡೆಸಿದ ಅಜ್ಜನವರ ಪರಂಪರೆಯನ್ನು ಇಂದಿಗೂ ಗ್ರಾಮಸ್ಥರೆಲ್ಲರೂ ಸೇರಿ ಜೀವಂತವಾಗಿಟ್ಟಿದ್ದೇವೆ."

– **ವೀರಣ್ಣ ಪವಾಡ,** ಗ್ರಾಮಸ್ಥರು ಹಾಗೂ ಭಕ್ತ ಮಂಡಳಿ, ಶಿಗ್ಲಿ

**ಮೂರು ದಿನಗಳ ಜಾತ್ರಾ ಸಂಭ್ರಮ**

**ಫೆ. 15 (ಮಹಾಶಿವರಾತ್ರಿ):** ಜಾಗರಣೆ-ಕೇವಲ ಎಚ್ಚರಿರುವುದಲ್ಲ, ಅಧ್ಯಾತ್ಮದ ಅರಿವು. ರಾತ್ರಿ ಪೂರ್ತಿ ಭಜನೆ ಹಾಗೂ ಶಿವಕೀರ್ತನೆ.

**ಫೆ. 16 (ಅಮವಾಸ್ಯೆ):** ಗದ್ದುಗೆಗೆ ಪವಿತ್ರ ಅಭಿಷೇಕ, ಭಕ್ತರಿಗೆ ಮಹಾಪ್ರಸಾದ ದಾಸೋಹ.

**ಫೆ. 17 (ಮಂಗಳವಾರ):** ಜಾತ್ರೆಯ ವೈಭವದ ಕ್ಷಣ-ಪಲ್ಲಕ್ಕಿ ಉತ್ಸವ. ಜೊತೆಗೆ ಜನಪ್ರಿಯ 'ಕಡುಬಿನ ಕಾಳಗ'.



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಅದು ಕೇವಲ ಕಲ್ಲಿನ ಮಠವಲ್ಲ-ಕಾಯಕವನ್ನೇ ಕೈಲಾಸವೆಂದು ನಂಬಿದ ಮಹಾನ್ ಚೇತನವೊಂದರ ಜೀವಂತ ಪಾಠಶಾಲೆ. ಬೆವರಿನ ಹನಿಗಳಲ್ಲಿ ದಾಸೋಹದ ಅಮೃತ ಉಣಿಸಿದ, ಸ್ವಾತಂತ್ರ್ಯದ ಕಿಚ್ಚು ಹಚ್ಚಿದ ಮತ್ತು ಸಾವಿನಲ್ಲೂ ಸತಿ-ಪತಿ ಒಂದಾಗಿ ನಡೆದ ಅಪರೂಪದ ಇಚ್ಛಾಮರಣದ ಸಾಕ್ಷಿಯಾಗಿ ಶಿಗ್ಲಿ ಇಂದು ಭಕ್ತರ ಮನಸ್ಸಿನಲ್ಲಿ ಪವಿತ್ರ ಸ್ಥಾನ ಪಡೆದಿದೆ.

ಇಲ್ಲಿನ ಆರಾಧ್ಯ ದೈವ ಶ್ರೀ ಗುರುಬಸಪ್ಪಜ್ಜ ಹಾಗೂ ಶ್ರೀಮತಿ ಶಾಂತವೀರಮ್ಮನವರ ಜಾತ್ರಾ ಮಹೋತ್ಸವವು ಫೆಬ್ರವರಿ 15ರಿಂದ ಭಕ್ತಿ-ಭಾವದ ಪರಾಕಾಷ್ಠೆಯೊಂದಿಗೆ ಆರಂಭಗೊಳ್ಳಲಿದೆ.

**ಬೆವರಿನ ಹನಿಯಲ್ಲಿ ಅರಳಿದ ದಾಸೋಹ :** ವಿಜಯಪುರ ಜಿಲ್ಲೆಯ ತಾಂಬೆ ಗ್ರಾಮದಿಂದ ವ್ಯಾಪಾರ ನಿಮಿತ್ತ ಶಿಗ್ಲಿಗೆ ಬಂದ ಗುರುಬಸಪ್ಪಜ್ಜರು, ಇಲ್ಲಿನ ಜನರ ಪ್ರೀತಿಗೆ ಮನಸೋತು ಶಾಶ್ವತವಾಗಿ ನೆಲೆಸಿದರು. ಅವರು ಎಂದಿಗೂ ಭಿಕ್ಷೆ ಬೇಡಲಿಲ್ಲ, ಕಾಣಿಕೆ ಕೇಳಲಿಲ್ಲ. ಆಶ್ರಮದ ಮುಂಭಾಗದ ಹೊಲದಲ್ಲಿ ಪತ್ನಿ ಶಾಂತವೀರಮ್ಮನವರ ಜೊತೆಯಲ್ಲಿ ಸ್ವತಃ ಮಣ್ಣು ಕಿವುಚಿ ಕಲ್ಲಂಗಡಿ, ಕರಬೂಜಿ ಬೆಳೆದು, ಬಂದ ಆದಾಯದಲ್ಲಿ ನಾಲ್ಕನೇ ಒಂದು ಭಾಗವನ್ನು ದಯೆ-ಧರ್ಮಕ್ಕೆ ಮೀಸಲಿಟ್ಟ 'ಕಾಯಕ ಯೋಗಿ'ಯವರು. ಅವರು ತೋರಿಸಿದ ಕಾಯಕ-ದಾಸೋಹದ ದಾರಿ ಇಂದಿಗೂ ಶಿಗ್ಲಿಯ ಮನೆಮನೆಗೆ ದೀಪವಾಗಿದೆ.

**ಸಾವಿನಲ್ಲೂ ಸಂಗಾತಿಗಳಾದ ಪವಾಡ :** ಗುರುಬಸಪ್ಪಜ್ಜರ ಜೀವನದ ಅತ್ಯಂತ ಅಪರೂಪದ ಅಧ್ಯಾಯ ಅವರ ಅಂತ್ಯದಲ್ಲಿದೆ. 1931ರ ಬನದ ಹುಣ್ಣಿಮೆಯಂದು, ಭಕ್ತರ ಸಮ್ಮುಖದಲ್ಲಿ ಶಿವನಾಮ ಸ್ಮರಣೆಯ ಮಧ್ಯೆ, ನಗುನಗುತ್ತಲೇ ಗುರುಬಸಪ್ಪಜ್ಜರು ಮತ್ತು ಶಾಂತವೀರಮ್ಮನವರು ಒಂದೇ ದಿನ ಇಚ್ಛಾಮರಣ ಹೊಂದಿದರು. ಅಂದು ನಿರ್ಮಿಸಲಾದ ಸಮಾಧಿಯೇ ಇಂದು ಭಕ್ತರ ಪಾಲಿಗೆ ನವಧಾಮವಾಗಿ ಪೂಜ್ಯವಾಗಿದೆ.

ಗಾಂಧೀಜಿಯ ದರ್ಶನ ಪಡೆದ ದೇಶಪ್ರೇಮಿ ಸಂತ ಆಧ್ಯಾತ್ಮದ ಜೊತೆಗೆ ದೇಶಪ್ರೇಮವೂ ಗುರುಬಸಪ್ಪಜ್ಜರಲ್ಲಿ ಜೀವಂತವಾಗಿತ್ತು. 1924ರ ಬೆಳಗಾವಿ ಕಾಂಗ್ರೆಸ್ ಅಧಿವೇಶನದಲ್ಲಿ ಗಾಂಧೀಜಿಯವರ ದರ್ಶನ ಪಡೆದ ಅವರು, ಹರ್ಡೇಕರ ಮಂಜಪ್ಪನವರ ಪತ್ರಿಕೆಗಳ ಮೂಲಕ ಶಿಗ್ಲಿಯಲ್ಲಿ ಸ್ವಾತಂತ್ರ್ಯದ ಚೇತನೆಯನ್ನು ಹರಡಿದರು. ಅವರ ಪ್ರೇರಣೆಯಿಂದಲೇ ಶಿಗ್ಲಿಯಲ್ಲಿ ಸ್ವಾತಂತ್ರ್ಯ ಯೋಧರ ಪಡೆ ರೂಪುಗೊಂಡಿತು.

**ವಿಶೇಷತೆ:** 'ರಟ್ಟೆ ಬಳೆ' ಚಿಕಿತ್ಸೆ ವೈದ್ಯಕೀಯ ಸೌಲಭ್ಯಗಳ ಕೊರತೆಯ ಕಾಲದಲ್ಲಿ ಗುರುಬಸಪ್ಪಜ್ಜರು ನೀಡುತ್ತಿದ್ದ ಔಷಧೋಪಚಾರ ಇಂದಿಗೂ ಜನಪ್ರಸಿದ್ಧ. ವಿಶೇಷವಾಗಿ ಅವರ 'ರಟ್ಟೆ ಬಳೆ' ಚಿಕಿತ್ಸೆಯ ಪರಂಪರೆ ಇಂದಿಗೂ ಮಠದಲ್ಲಿ ಮುಂದುವರಿದಿದೆ.

---

### ಎಸ್.ಐ.ಆರ್ ವಿರೋಧಿಸಿ ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಇಂದು ಪ್ರತಿಭಟನೆ

# ಮೂಲ ನಿವಾಸಿಗಳ ಹಕ್ಕು ಕಸಿಯುವ ಹುನ್ನಾರ



ವಿಶೇಷ ಮತಪಟ್ಟಿ ಪರಿಷ್ಕರಣೆ ಹಿಂದೆ ಕೇಂದ್ರದ ಬಿಜೆಪಿ ಸರ್ಕಾರದ ಕುತಂತ್ರವಿದೆ. ಚುನಾವಣಾ ಆಯೋಗವನ್ನು ದುರಪಯೋಗಪಡಿಸಿಕೊಂಡು ಅರ್ಹ ಮತದಾರರನ್ನು ಪಟ್ಟಿಯಿಂದ ಹೊರಗಿರಿಸಿ ಚುನಾವಣೆ ಗೆಲ್ಲಲು ಬಿಜೆಪಿ ಈ ಪರಿಷ್ಕರಣೆ ನಡೆಸುತ್ತಿದೆ. ಬಿಜೆಪಿ ಆಡಳಿತವಿರುವ ರಾಜ್ಯಗಳಿಂದ ಮೈಕ್ರೋ ಅಬ್ಸರ್ವರ್‌ಗಳು ಸ್ಥಳೀಯ ಸಿಬ್ಬಂದಿಗಳನ್ನು ಬದಿಗೊತ್ತಿ ಮನಬಂದಂತೆ ಮತದಾರರ ಪಟ್ಟಿಯಲ್ಲಿ ಹೆಸರಗಳನ್ನು ಅಳಿಸುತ್ತಿದ್ದಾರೆ ಎಂದು ವೆಂಕಟೇಶಯ್ಯ ಆರೋಪಿಸಿದರು.

■ **ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಸರ್ಕಾರ ಚುನಾವಣಾ ಆಯೋಗವನ್ನು ತಮ್ಮ ಕೈಗೊಂಬೆಯಾಗಿ ಉಪಯೋಗಿಸಿ ದೇಶದಲ್ಲಿ ಎಸ್.ಐ.ಆರ್ ಮೂಲಕ ವಿಶೇಷ ತೀವ್ರ ಪರಿಷ್ಕರಣೆ ನಡೆಸುತ್ತಿರುವ ಆಯೋಗವು ನಮ್ಮ ದೇಶದ ಮೂಲ ನಿವಾಸಿಗಳಾದ ದಲಿತ, ಹಿಂದುಳಿದ, ಅಲ್ಪಸಂಖ್ಯಾತರ ಹಾಗೂ ಮಹಿಳೆಯರ ಸಂವಿಧಾನಬದ್ಧ ಮತದಾನದ ಹಕ್ಕನ್ನು ಕಸಿದುಕೊಳ್ಳುವ ಹುನ್ನಾರ ನಡೆಸುತ್ತಿದ್ದಾರೆ ಎಂದು ದಲಿತ ಸಂಘರ್ಷ ಸಮಿತಿಯ ಸಂಚಾಲಕ ವೆಂಕಟೇಶಯ್ಯ ಆಕ್ರೋಶ ವ್ಯಕ್ತಪಡಿಸಿದರು.

ಅವರು ಸ್ಲಂ ಜನಾಂದೋಲನ-ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಎಸ್.ಐ.ಆರ್ ವಿರೋಧಿಸಿ ಫೆ.11ರಂದು ಹಮ್ಮಿಕೊಂಡಿರುವ ಹೋರಾಟದ ಪೋಸ್ಟರ್‌ನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಕೇಂದ್ರ ಸರ್ಕಾರದ ಸೂಚನೆಯಂತೆ ಅವೈಜ್ಞಾನಿಕವಾಗಿ ಅತುರದಲ್ಲಿ ಮತದಾರರ ಪಟ್ಟಿಯಲ್ಲಿ ವಿಶೇಷ ತೀವ್ರ ಪರಿಷ್ಕರಣೆ ನಡೆಸುತ್ತಿರುವ ಚುನಾವಣಾ ಆಯೋಗವು ಮೂಲ ನಿವಾಸಿಗಳ, ಲಕ್ಷಾಂತರ ಮತದಾರರ ಹಕ್ಕನ್ನು ಕಸಿದುಕೊಳ್ಳುತ್ತಿರುವುದು ಖಂಡನೀಯ. ಇದನ್ನು ವಿರೋಧಿಸಿ ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಮಿತಿಯ ಕರೆಯ ಮೇರೆಗೆ ಫೆ. 11ರಂದು ರಾಜ್ಯಾದಂತ ಏಕಕಾಲಕ್ಕೆ ಹೋರಾಟ ಹಮ್ಮಿಕೊಂಡಿದ್ದು, ಮೂಲ ನಿವಾಸಿಗಳು ಎಲ್ಲರೂ ಭಾಗವಹಿಸಿ ಜನವಿರೋಧಿ ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗಕ್ಕೆ ಎಚ್ಚರಿಕ್ಕೆ ನೀಡಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಸ್ಲಿಂ ಸಮಾಜದ ಮುಖಂಡರಾದ ಬಾಬಾಜಾನ ಬಳಗಾನೂರ, ಮಹ್ಮದಯುಸುಫ ನಮಾಜಿ, ಗದಗ ಜಿಲ್ಲಾ ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಅಧ್ಯಕ್ಷರಾದ ಪರವೀನಬಾನು ಹವಾಲ್ದಾರ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಶರಣಪ್ಪ ಸೂಡಿ, ವೆಂಕಟೇಶ ಬಿಂದಕಟ್ಟಿ, ಮೆಹಬೂಬಸಾಬ ಬಳ್ಳಾರಿ, ಸಲೀಂ ಹರಿಹರ, ಖಾಜಾಸಾಬ ಇಸ್ಮಾಯಿಲನವರ, ಶಂಕ್ರಪ್ಪ ರೋಣದ, ಗೌಸಸಾಬ ಅಕ್ಕಿ, ಮಕ್ತುಮಸಾಬ ಮುಲ್ಲಾನವರ ಮುಂತಾದ ಪದಾಧಿಕಾರಿಗಳು ಉಪಸ್ಥಿತರಿದ್ದರು.

---

# ಮನೆಯಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನಾವು ದೇಶ ಕಾಯ್ದು ಬಂದ ಯೋಧರು. ಈಗ ವಿಶ್ರಾಂತ ಜೀವನದಲ್ಲಿರುವ ನಾವು ನಮ್ಮ ಮಕ್ಕಳಿಗೆ ಮನೆಯಲ್ಲಿ ಉತ್ತಮ ಸಂಸ್ಕಾರವನ್ನು ನೀಡಿ ಅವರನ್ನೂ ದೇಶ ಸೇವೆಗೆ ಸನ್ನದ್ಧರನ್ನಾಗಿ ಮಾಡಬೇಕಿದೆ. ಈ ವಿಷಯವನ್ನು ಗಮನದಲ್ಲಿಟ್ಟುಕೊಂಡು ನಾವೆಲ್ಲರೂ ಮನೆಯಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡೋಣ ಎಂದು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಹೇಳಿದರು.

ಪಟ್ಟಣದ ನಿವೃತ್ತ ಸೈನಿಕರ ಸಂಘದ ಕಚೇರಿಯಲ್ಲಿ ನಡೆದ ನಿವೃತ್ತ ಸೈನಿಕರ ಮಾಸಿಕ ಸಭೆಯಲ್ಲಿ ಅವರು ಮಾತನಾಡಿದರು.

ಸಮಾಜದಲ್ಲಿನ ಅಶಕ್ತರಿಗೆ ಸಹಾಯ ಮಾಡುವುದನ್ನು ನಾವುಗಳು ರೂಢಿಸಿಕೊಳ್ಳೋಣ. ಅನ್ಯಾಯವೇನಾದರೂ ನಡೆದರೆ ನಮಗೇಕೆ ಬೇಕು ಎಂದು ಸುಮ್ಮನಿರದೆ ಅನ್ಯಾಯಕ್ಕೊಳಗಾದ ವ್ಯಕ್ತಿಗೆ ನ್ಯಾಯ ಕೊಡಿಸಲು ನಮ್ಮ ಕೈಲಾದ ಪ್ರಯತ್ನ ಮಾಡೋಣ. ಇದೂ ಸಹ ಸಮಾಜ ಸೇವೆಯ ಒಂದು ಭಾಗವೇ ಆಗಿದೆ ಎಂದರು.

ನಿವೃತ್ತ ಸೈನಿಕರಿಗೆ ನಿವೇಶನ ನೀಡಬೇಕೆಂದು ಈಗಾಗಲೇ ಪಟ್ಟಣ ಪಂಚಾಯಿತಿಗೆ 34 ಅರ್ಜಿಗಳನ್ನು ನೀಡಲಾಗಿದ್ದು, ಮೇಲಿನಿಂದ ಸಮರ್ಪಕ ಉತ್ತರ ಬರುವುದನ್ನು ಕಾಯುತ್ತಿದ್ದೇವೆ. ಹೆಸ್ಕಾಂನವರು ಇಲ್ಲಸಲ್ಲದ ಸೇವೆಗಳನ್ನು ತೋರಿಸಿ ಹಣ ವಸೂಲಿ ಮಾಡುತ್ತಿರುವುದನ್ನು ನಿಲ್ಲಿಸುವಂತೆ ಈಗಾಗಲೇ ಹೆಸ್ಕಾಂನ ಮೇಲಾಧಿಕಾರಿಗಳಿಗೆ ಅರ್ಜಿ ನೀಡಿದ್ದು, ಅಲ್ಲಿಂದಲೂ ಸಹ ಉತ್ತರದ ನಿರೀಕ್ಷೆಯಲ್ಲಿದ್ದೇವೆ ಎಂದರು.

ಸಭೆಯಲ್ಲಿ ನಿವೃತ್ತ ಸೈನಿಕರಾದ ಪ್ರಭುದೇವ ಮುಕ್ಕನಗೌಡ್ರ, ಸಿದ್ರಾಮಪ್ಪ ಕಟ್ಟಿಮನಿ, ಗುರುಶಾಂತಗೌಡ ಮಲ್ಲನಗೌಡ್ರ, ಈರಪ್ಪ ದೊಡ್ಡಣ್ಣವರ, ರಾಮಪ್ಪ ರೋಣದ, ಶಶಿಕಾಂತ ಕರಡಿ, ಪ್ರವೀಣ ಶಿರೂರ, ಬಸವೇಶ್ವರ ಚಿಕ್ಕೊಪ್ಪದ, ದಾವಲಸಾಬ ಕಿಲ್ಲೇದಾರ, ಕುಮಾರಸ್ವಾಮಿ ಕೋರಧಾನ್ಯಮಠ, ಸಂಗಪ್ಪ ಕುಷ್ಟಗಿ, ಉಮೇಶ ಕರಮುಡಿ, ಬಸವರಾಜ ಯಕ್ಕುಂಡಿ ಮತ್ತಿತರರಿದ್ದರು.

---

# ಕಾಯಕ ಶರಣರ ಜಯಂತಿ ಆಚರಣೆ



■ **ವಿಜಯಸಾಕ್ಷಿ ಸುದ್ದಿ, ಕೊಟ್ಟೂರು**

ತಾಲೂಕು ಕಚೇರಿಯ ಮಹಾತ್ಮ ಗಾಂಧೀಜಿ ಸಭಾಂಗಣದಲ್ಲಿ "ಕಾಯಕ ಶರಣರ ಜಯಂತಿ" (ಮಾದರ ಚನ್ನಯ್ಯ, ಮಾದಾರ ಧೂಳಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ, ಉರಿಲಿಂಗ ಪೆದ್ದಿ) ಕಾರ್ಯಕ್ರಮವನ್ನು ಭಾನುವಾರ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ್ ಅಮರೇಶ್ ಜಿ.ಕೆ. ಅವರು ಮಾತನಾಡಿ, ಶರಣರು ಕಾಯಕವನ್ನು ಜೀವನದ ಮೂಲ ತತ್ವವಾಗಿ ನಂಬಿದ್ದವರು. ಸತ್ಯಶುದ್ಧ ಕಾಯಕದಿಂದ ಬಂದ ಆದಾಯದಲ್ಲಿ ಅಗತ್ಯವಿರುವಷ್ಟನ್ನು ಮಾತ್ರ ಉಳಿಸಿಕೊಂಡು, ಉಳಿದುದನ್ನು ಸಮಾಜಕ್ಕೆ ದಾಸೋಹದ ಮೂಲಕ ಹಂಚುತ್ತಿದ್ದರು ಎಂದರು.

"ಅಂಬಲಿ, ಕಂಬಳಿ ಆಸ್ತಿ – ಮಿಕ್ಕಿದ್ದೆಲ್ಲಾ ಜಾಸ್ತಿ" ಎಂಬ ಮಾದರ ಚನ್ನಯ್ಯನ ವಚನವು ಸಂಗ್ರಹ ಬುದ್ಧಿಗೆ ವಿರೋಧ ವ್ಯಕ್ತಪಡಿಸುತ್ತದೆ. ಶರಣರು ಸಮಾಜದ ಕೆಳವರ್ಗಕ್ಕೆ ಸೇರಿದವರಾಗಿದ್ದರೂ, ಅವರ ಚಿಂತನೆಗಳು ಹಾಗೂ ಅವರು ಅನುಸರಿಸಿದ ಆದರ್ಶ ಜೀವನದಿಂದ ಮಹಾನ್ ಶರಣರಾಗಿ ಇತಿಹಾಸದಲ್ಲಿ ಉಳಿದಿದ್ದಾರೆ. ಗುರು ಕೊಟ್ಟ ಕಲ್ಲನ್ನೇ ಲಿಂಗವೆಂದು ಪೂಜಿಸಿ, ಸಾಧನೆಯ ಮೂಲಕ ಉರಿಲಿಂಗ ಪೆದ್ದಿಯಾಗಿ ರೂಪುಗೊಂಡ ಶರಣರ ಬದುಕು ಅತ್ಯಂತ ರೋಚಕವಾಗಿದೆ. ಶರಣರ ಚಿಂತನೆಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡರೆ ಜೀವನ ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

ಮುಖಂಡ ಹಾಗೂ ವಕೀಲರಾದ ಟಿ. ಹನುಮಂತಪ್ಪ ಅವರು ಮಾತನಾಡಿ, ವಚನ ಸಾಹಿತ್ಯದಲ್ಲಿ ಅಪಾರ ಶಕ್ತಿ ಅಡಗಿದೆ. ಸಮಸಮಾನ ಸಮಾಜದ ಕನಸು ಕಂಡ ಶರಣರ ಸಾಹಿತ್ಯದ ಮೌಲ್ಯಗಳನ್ನು ನಮ್ಮ ಸಂವಿಧಾನದಲ್ಲಿಯೂ ಅಳವಡಿಸಲಾಗಿದೆ. ಸಂವಿಧಾನವಿಲ್ಲದ ಕಾಲದಲ್ಲಿ ವಚನಕಾರರ ಸಾಹಿತ್ಯವೇ ಸಮಾಜವನ್ನು ಸನ್ಮಾರ್ಗದಲ್ಲಿ ನಡೆಸಿದ ಒಂದು ರೀತಿಯ ಸಂವಿಧಾನವಾಗಿತ್ತು. ಇಂದಿನ ದಿನಗಳಲ್ಲಿ ಮೌಲ್ಯಗಳ ಕೊರತೆ ಕಂಡುಬರುತ್ತಿದೆ. ಪ್ರತಿಯೊಬ್ಬರೂ ಪರಸ್ಪರ ಪ್ರೀತಿಸುವುದನ್ನು ಕಲಿತರೆ ಸಮಾಜದಲ್ಲಿ ಶಾಂತಿ ನೆಲೆಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಶಿರಸ್ತೇದಾರರಾದ ಹೆಚ್.ಎಂ. ಕೊಟ್ರಮ್ಮ, ಚಂದ್ರನಾಯ್ಕ, ಕಂದಾಯ ನಿರೀಕ್ಷಕ ಡಿ. ಶಿವಕುಮಾರ, ಹರೀಶ, ದೇವರಾಜ, ಮಂಜಮ್ಮ, ಸಮಾಜ ಕಲ್ಯಾಣ ಇಲಾಖೆಯ ವೀರೇಶ ತುಪ್ಪದ, ಮುಖಂಡರಾದ ಮಂಜುನಾಥ, ಮಣಿಕಂಠ, ಕನ್ನಕಟ್ಟಿ ಶಿವರಾಜ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಸಿ.ಎಂ. ಗುರುಬಸವರಾಜ ಸ್ವಾಗತಿಸಿ ಕಾರ್ಯಕ್ರಮವನ್ನು ನಿರೂಪಿಸಿದರು.

---

### 2026-27ರ ಬಜೆಟ್‌ನಲ್ಲಿ ಅನುದಾನ ಮೀಸಲಿಡುವಂತೆ ಆಗ್ರಹ

# ಸ್ಟ್ರೀಟ್ ವಾಟರ್ ಟ್ಯಾಂಕ್ ಸೌಲಭ್ಯ ಒದಗಿಸಿ!

■ **ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಹಗರಿಬೊಮ್ಮನಹಳ್ಳಿ ಪುರಸಭೆ ವ್ಯಾಪ್ತಿಯ 23 ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆಯ ಕೊರತೆ ತೀವ್ರವಾಗಿ ಕಂಡು ಬರುತ್ತಿದ್ದು, ಸಾರ್ವಜನಿಕರು ದಿನನಿತ್ಯದ ಅಗತ್ಯಗಳಿಗೆ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ವಿಶೇಷವಾಗಿ ಬೇಸಿಗೆ ಕಾಲ ಹಾಗೂ ತುರ್ತು ಸಂದರ್ಭಗಳಲ್ಲಿ ನೀರಿನ ಸಮಸ್ಯೆ ಮತ್ತಷ್ಟು ಗಂಭೀರವಾಗುತ್ತದೆ.

ಪ್ರಸ್ತುತ ಅನೇಕ ವಾರ್ಡ್‌ಗಳಲ್ಲಿ ಸ್ಟ್ರೀಟ್ ವಾಟರ್ ಟ್ಯಾಂಕ್ ಸೌಲಭ್ಯ ಲಭ್ಯವಿಲ್ಲ, ಇದರಿಂದ ಮಹಿಳೆಯರು, ಹಿರಿಯ ನಾಗರಿಕರು ಹಾಗೂ ಸಾಮಾನ್ಯ ಜನತೆ ಹೆಚ್ಚು ಸಂಕಷ್ಟಕ್ಕೆ ಒಳಗಾಗುತ್ತಿದ್ದಾರೆ. ಕುಡಿಯುವ ನೀರಿನ ಕೊರತೆ ಸಾರ್ವಜನಿಕ ಆರೋಗ್ಯ ಮತ್ತು ಸ್ವಚ್ಛತೆಯ ಮೇಲೆಯೂ ಕೆಟ್ಟ ಪರಿಣಾಮ ಬೀರುತ್ತಿದೆ.

ಜನಸಾಮಾನ್ಯರ ಹಿತದೃಷ್ಟಿಯಿಂದ ಹಾಗೂ ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ, ಹಗರಿಬೊಮ್ಮನಹಳ್ಳಿ ಪುರಸಭೆ ವ್ಯಾಪ್ತಿಯ ಎಲ್ಲಾ 23 ವಾರ್ಡ್‌ಗಳಲ್ಲಿ ಸ್ಟ್ರೀಟ್ ವಾಟರ್ ಟ್ಯಾಂಕ್ ಸೌಲಭ್ಯವನ್ನು ಒದಗಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಈ ಹಿನ್ನೆಲೆಯಲ್ಲಿ, 2026–27ರ ಪುರಸಭೆ ಬಜೆಟ್‌ನಲ್ಲಿ ಅಗತ್ಯ ಅನುದಾನವನ್ನು ಮೀಸಲಿಟ್ಟು ಯೋಜನೆಯನ್ನು ಜಾರಿಗೆ ತರಬೇಕು ಎಂದು ಪುರಸಭೆ ಆಡಳಿತವನ್ನು ಸಾರ್ವಜನಿಕರು ಮನವಿ ಮಾಡಿದ್ದಾರೆ. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರವೇ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಅವರು ಆಗ್ರಹಿಸಿದ್ದಾರೆ.




---

# ಕ್ಷೇತ್ರ ಉಳಿಸಿಕೊಳ್ಳಲು ಜೆಡಿಎಸ್ ಅಭ್ಯರ್ಥಿಗೆ ಅವಕಾಶ ನೀಡುವಂತೆ ಕುಮಾರಸ್ವಾಮಿಗೆ ಮನವಿ



■ **ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ**

ಪಶ್ಚಿಮ ಪದವೀಧರ ಕ್ಷೇತ್ರದ ಮುಂದಿನ ಚುನಾವಣೆಯಲ್ಲಿ ಜೆಡಿಎಸ್-ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಸ್ಪರ್ಧಿಸಲು ಅವಕಾಶ ನೀಡಬೇಕೆಂದು ಮಾಜಿ ಸಿನೆಟ್ ಸದಸ್ಯ ಹಾಗೂ ಜೆಡಿಎಸ್ ಮುಖಂಡ ಶಿವಶಂಕರ ಕಲ್ಲೂರ ಅವರು ಜೆಡಿಎಸ್ ರಾಜ್ಯಾಧ್ಯಕ್ಷ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಬೆಂಗಳೂರು ಜೆಪಿ ಭವನದಲ್ಲಿ ನಡೆದ ರಾಜ್ಯಮಟ್ಟದ ಪಕ್ಷದ ಸಭೆಯಲ್ಲಿ ಈ ಮನವಿ ಸಲ್ಲಿಸಲಾಗಿದ್ದು, ಈಗಾಗಲೇ ಕ್ಷೇತ್ರದಾದ್ಯಂತ ಪ್ರವಾಸ ನಡೆಸಿರುವುದಾಗಿ ಹಾಗೂ ಪದವೀಧರರಲ್ಲಿ ತಮ್ಮ ಅಭ್ಯರ್ಥಿತ್ವಕ್ಕೆ ಉತ್ತಮ ಸ್ಪಂದನೆ ದೊರೆಯುತ್ತಿರುವುದಾಗಿ ಕಲ್ಲೂರ ಅವರು ತಿಳಿಸಿದರು. ಜೊತೆಗೆ ಕಳೆದ ಚುನಾವಣೆಯಲ್ಲಿ ತಮಗಾಗಿರುವ ಅನ್ಯಾಯವನ್ನು ಸರಿಪಡಿಸಿ, ಈ ಬಾರಿ ಮೈತ್ರಿ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಲು ಅವಕಾಶ ಕಲ್ಪಿಸಬೇಕೆಂದು ವಿನಂತಿಸಿದರು.

ಈ ವೇಳೆ ಹಾಜರಿದ್ದ ಮಾಜಿ ಸಚಿವರಾದ ಆಲ್ಕೋಡ ಹನುಮಂತಪ್ಪ, ಕೆ.ಎನ್. ಗಡ್ಡಿ, ಮಾಜಿ ಶಾಸಕ ವೀರಭದ್ರಪ್ಪ ಹಾಲರವಿ, ಜೆಡಿಎಸ್ ಧಾರವಾಡ ಗ್ರಾಮಾಂತರ ಜಿಲ್ಲಾಧ್ಯಕ್ಷ ಬಿ.ಬಿ. ಗಂಗಾಧರಮಠ, ಮಹಾನಗರ ಅಧ್ಯಕ್ಷ ಗುರುರಾಜ ಹುಣಸಿಮರದ, ಹಾವೇರಿ ಜಿಲ್ಲಾಧ್ಯಕ್ಷ ಮಂಜುನಾಥ ಗೌಡ ಶಿವಣ್ಣವರ, ಗದಗ ಜಿಲ್ಲಾಧ್ಯಕ್ಷ ಮಕ್ತುಮಸಾಬ್ ಮುಧೋಳ ಸೇರಿದಂತೆ ಹಲವು ಮುಖಂಡರು ಕುಮಾರಸ್ವಾಮಿಯವರೊಂದಿಗೆ ಚರ್ಚೆ ನಡೆಸಿದರು. ಚುನಾವಣೆಗೆ ಜೆಡಿಎಸ್ ಪಕ್ಷದಿಂದ ಸಂಘಟನಾ ಚತುರ ಶಿವಶಂಕರ ಕಲ್ಲೂರ ಅವರಿಗೆ ಟಿಕೆಟ್ ನೀಡಬೇಕೆಂದು ಒಮ್ಮತದಿಂದ ಶಿಫಾರಸು ಮಾಡಲಾಗಿದ್ದು, ಇದರಿಂದ ಈ ಭಾಗದಲ್ಲಿ ಪಕ್ಷದ ಸಂಘಟನೆಗೆ ಮತ್ತಷ್ಟು ಬಲ ಸಿಗಲಿದೆ ಎಂದು ನಾಯಕರು ಮನವರಿಕೆ ಮಾಡಿದರು.

ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಕುಮಾರಸ್ವಾಮಿ ಅವರು, ಮೈತ್ರಿ ಪಕ್ಷದ ಅಭ್ಯರ್ಥಿಯಾಗಿ ಕಲ್ಲೂರ ಅವರ ಹೆಸರನ್ನು ಅಂತಿಮಗೊಳಿಸುವ ಕುರಿತು ಬಿಜೆಪಿ ವರಿಷ್ಠರೊಂದಿಗೆ ಚರ್ಚೆ ನಡೆಸುವುದಾಗಿ ಹಾಗೂ ಪಕ್ಷದೊಳಗೆ ಸೂಕ್ತ ತೀರ್ಮಾನ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡರಾದ ಜಿ.ಎನ್. ತೋಟದ, ಪ್ರಕಾಶ ಅಂಗಡಿ, ವೀರೇಶ್ ಶಾನುಭೋಗರ, ಪಕ್ಕೀರಗೌಡ ದೊಡ್ಡಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಾವಿನಲ್ಲೂ ಸಾರ್ಥಕತೆ ಮೆರೆದ ಮಹಾದೇವಪ್ಪ ಅಬ್ಬಿಗೇರಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಹಾಳಕೇರಿ ಶಾಖಾ ಮಠದ ಹತ್ತಿರದ ನಿವಾಸಿ ಮಹಾದೇವಪ್ಪ ಶಂಕ್ರಪ್ಪ ಅಬ್ಬಿಗೇರಿ (84) ಮಂಗಳವಾರ ಮುಂಜಾನೆ ನಿಧನರಾದರು. ಮೃತರಿಗೆ ಪತ್ನಿ, ಓರ್ವ ಪುತ್ರ, ಈರ್ವರು ಪುತ್ರಿಯರಿದ್ದಾರೆ.

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಪದಾಧಿಕಾರಿಗಳು ಮೃತರ ನಿವಾಸಕ್ಕೆ ತೆರಳಿ ಕುಟುಂಬಕ್ಕೆ ಸಾಂತ್ವನ ಹೇಳಿದರಲ್ಲದೆ ಮೃತರ ನೇತ್ರದಾನ, ದೇಹದಾನ ಮಾಡುವಂತೆ ಪ್ರೇರಣೆ ನೀಡಿದರು. ಮೃತರ ಪತ್ನಿ, ಪುತ್ರ ನಾಗಭೂಷಣ ಅವರ ಒಪ್ಪಿಗೆಯಿಂದ ನೇತ್ರದಾನದೊಂದಿಗೆ ನಗರದ ಡಿಜಿಎಂ ಆಯುರ್ವೇದಿಕ್ ಮಹಾವಿದ್ಯಾಲಯದ ಶರೀರ ಶಾಸ್ತ್ರ ವಿಭಾಗದ ವೈದ್ಯಕೀಯ ವಿದ್ಯಾರ್ಥಿಗಳ ಅಧ್ಯಯನಕ್ಕೆ ಮಂಗಳವಾರ ಮಧ್ಯಾಹ್ನ ದೇಹದಾನದ ಪ್ರಕ್ರಿಯೆ ಕೈಗೊಳ್ಳಲಾಯಿತು. ವ್ಯಕ್ತಿಯ ಸಾವಿನ ಬಳಿಕವೂ ಸಾರ್ಥಕತೆ ಮೆರೆದ ದುಃಖತಪ್ತ ಕುಟುಂಬದ ಕಾರ್ಯವನ್ನು ಸೇರಿದ ಜನಸ್ತೋಮ ಬಣ್ಣಿಸಿದರು.

ಮಹಾವಿದ್ಯಾಲಯದ ಡಾ. ವೀರೇಶ ಅಡೂರ, ವೈದ್ಯಕೀಯ ವಿದ್ಯಾರ್ಥಿಗಳು, ಅಬ್ಬಿಗೇರಿ ಕುಟುಂಬ ವರ್ಗ, ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ಪ್ರವೀಣ ವಾರಕರ, ರಮೇಶ ಶಿಗ್ಲಿ, ವಿಜಯ ಅಬ್ಬಿಗೇರಿ, ದತ್ತುದಾಸ ಮಣೇಕರ, ಸುರೇಶ ಅಬ್ಬಿಗೇರಿ, ಮಂಜುನಾಥ ಕವಲೂರ, ಅಜ್ಜಣ್ಣ ಮಲ್ಲಾಡದ, ಪ್ರಸಾದ ಅಬ್ಬಿಗೇರಿ ಮುಂತಾದವರಿದ್ದರು.

### ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದಲ್ಲಿ ಸಡಗರದ ರಥೋತ್ಸವ

# ಕುಮಾರ ಶಿವಯೋಗಿಗಳ ಸಮಾಜ ಸೇವೆ ಅನನ್ಯ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶಿವಯೋಗ ಮಂದಿರದಲ್ಲಿ ಮಠಗಳನ್ನು ನಿರ್ವಹಿಸುಲು ಸನ್ನದ್ಧರಾಗುವ ವಟುಗಳನ್ನು ತಯಾರಿಸುವ ಗುರುಕುಲವನ್ನು ಸ್ಥಾಪಿಸಿ ಈ ನಾಡಿಗೆ ಕಲ್ಯಾಣವನ್ನುಂಟು ಮಾಡಿದವರು ಹಾನಗಲ್ಲ ಗುರುಕುಮಾರ ಶಿವಯೋಗಿಗಳು. ಅವರ ದೂರದೃಷ್ಟಿಯ ಫಲವಿಂದು ಬೆಳೆದು ಹೆಮ್ಮರವಾಗಿ ನಾಡಿನಾದ್ಯಂತ ಅನೇಕ ಹರ ಗುರು ಚರ ಮೂರ್ತಿಗಳನ್ನು ಕಾಣುವಲ್ಲಿ ಅವರ ಸೇವೆ ಅಪಾರವಾಗಿದೆ. ಕುಮಾರ ಶಿವಯೋಗಿಗಳು ಈ ನಾಡಿಗೆ, ಸಮಾಜಕ್ಕೆ ಸಲ್ಲಿಸಿರುವ ಸೇವೆ ಅನನ್ಯವಾದುದು ಎಂದು ಹಾಲಕೆರೆ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಹೇಳಿದರು.

ಸಮೀಪದ ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದಲ್ಲಿ ಸೋಮವಾರ ಜರುಗಿದ ಲಿಂ. ಶ್ರೀ ಕುಮಾರ ಮಹಾಶಿವಯೋಗಿಗಳವರ 95ನೇ ಪುಣ್ಯ ಸ್ಮರಣೋತ್ಸವ ಹಾಗೂ



ರಥೋತ್ಸವದ ನಂತರ ನಡೆದ ಧಾರ್ಮಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಆಶೀರ್ವಚನ ನೀಡಿದರು.

ಹಾನಗಲ್ಲ ಕುಮಾರ ಶಿವಯೋಗಿಗಳು, ಹಾವೇರಿಯ ಶಿವಬಸವ ಸ್ವಾಮೀಜಿಗಳವರು ಶಿವಯೋಗ ಮಂದಿರದ ಶಾಖಾ ಮಠವನ್ನು ನಿಡಗುಂದಿಕೊಪ್ಪದಲ್ಲಿ ಸ್ಥಾಪಿಸಿ ಈ ಭಾಗದ ಜನರಿಗೆ ಆರೋಗ್ಯ ದಾಸೋಹ ನೀಡುವ ಕಾರ್ಯಕ್ಕೆ ಇಲ್ಲಿನ ಸ್ವಾಮೀಜಿಗಳನ್ನು ಹಚ್ಚಿದರು. ಅವರ ಅಪೇಕ್ಷೆಯಂತೆ ಶ್ರೀಮಠದ ಚನ್ನಬಸವ ಸ್ವಾಮೀಜಿ, ಶಿವಬಸವ ಸ್ವಾಮೀಜಿ ಆರೋಗ್ಯ ದಾಸೋಹದ ಕಾರ್ಯವನ್ನು ಅನವರತ ಮಾಡುತ್ತ ಬಂದರು.

ಕರ್ನಾಟದಲ್ಲಿನ ಬಹುತೇಕ ಮಠಗಳು ಅನ್ನ ದಾಸೋಹ, ಶೈಕ್ಷಣಿಕ ದಾಸೋಹ ಮುಂತಾದವುಗಳನ್ನು ಮಾಡುತ್ತ ಬಂದಿವೆ. ಆದರೆ ಭಕ್ತ ಜನತೆಗೆ ಅತಿ ಅವಶ್ಯಕವಾದ ಆರೋಗ್ಯ ದಾಸೋಹವನ್ನು ನೀಡುವ ಮಠವಿದ್ದರೆ ಅದು ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರವಾಗಿದೆ. ಈ ಹಿಂದಿನ ಶ್ರೀಗಳು ಕೈಗೊಂಡ ಆರೋಗ್ಯ ದಾಸೋಹವನ್ನು ಇಂದಿನ ಪೀಠಾಧಿಪತಿಗಳಾಗಿರುವ ಅಭಿನವ ಚನ್ನಬಸವ ಸ್ವಾಮೀಜಿ ಮುಂದುವರೆಸಿಕೊಂಡು ಬರುತ್ತಿರುವುದು ಶ್ಲಾಘನೀಯ. ಈಗೀಗ ಆಯುರ್ವೇದಕ್ಕೆ ಹೆಚ್ಚಿನ ಮಹತ್ವ ಸಿಗುತ್ತಿದೆ.

ಇಂತಹ ಸಂದರ್ಭದಲ್ಲಿ ಶ್ರೀಮಠದಿಂದ ಆಯುರ್ವೇದ ಕುರಿತು ಒಂದು ಸಂಶೋಧನಾ ಕೇಂದ್ರ ಪ್ರಾರಂಭಗೊಂಡರೆ ಅದು ಬಹಳಷ್ಟು ಜನರಿಗೆ ಉಪಯೋಗವಾಗುತ್ತದೆ. ಈ ದಿಶೆಯಲ್ಲಿ ಶ್ರೀಮಠದ ಈಗಿನ ಸ್ವಾಮೀಜಿಗಳು ಕಾರ್ಯ ಪ್ರವೃತ್ತರಾಗಲಿ ಎಂದರು.

ಹಾವೇರಿ ಹುಕ್ಕೇರಿಮಠದ ಸದಾಶಿವ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಅಂಕಲಗಿಯ ಅಡವಿ ಸಿದ್ಧೇಶ್ವರ ಸ್ವಾಮೀಜಿ, ಗದಗ-ಹೊಸಪೇಟೆಯ ಚಂದ್ರಶೇಖರ ದೇವರು, ಲಿಂಗನಾಯಕನ ಹಳ್ಳಿಯ ನಿರಂಜನ ದೇವರು, ಹರ-ಗುರು-ಚರ ಮೂರ್ತಿಗಳು ಉಪಸ್ಥಿತರಿದ್ದರು. ಶಿಕ್ಷಕ ಆರ್.ವಿ. ಬೆಲ್ಲದ ನಿರ್ವಹಿಸಿದರು.

ಬೆಳಿಗ್ಗೆ ಬೈಲಹೊಂಗಲ ಮೂರುಸಾವಿರ ಶಾಖಾಮಠದ ಪ್ರಭು ನೀಲಕಂಠ ಸ್ವಾಮೀಜಿಗಳ ಅಡ್ಡಪಲ್ಲಕ್ಕಿ ಮಹೋತ್ಸವವು ಸಡಗರ ಸಂಭ್ರಮದಿಂದ ಜರುಗಿತು.

ಅಭಿನವ ಚನ್ನಬಸವ ಸ್ವಾಮೀಜಿ ಆಶೀರ್ವಚನ ನೀಡಿ, ಶ್ರೀ ಮಠದಲ್ಲಿ ಹಿಂದಿನಿಂದಲೂ ನಡೆದು ಬಂದಿರುವ ಆರೋಗ್ಯ ದಾಸೋಹ ಎಂದಿಗೂ ಮುಂದುವರೆಯುತ್ತದೆ. ಈ ಮಠದ ಸದ್ಭಕ್ತರು ಮಠದ ಮೇಲೆ ಅಪಾರವಾದ ಶ್ರದ್ಧೆ ಭಕ್ತಿಯನ್ನಿರಿಸಿದ್ದಾರೆ. ಅವರೆಲ್ಲರ ಸಹಾಯ-ಸಹಕಾರಗಳಿಂದ ಶ್ರೀಮಠವು ಏಳಿಗೆಯ ಹಾದಿಯಲ್ಲಿ ಮುನ್ನಡೆಯುತ್ತಿದೆ. ಮಠದ ಜಾತ್ರಾ ಮಹೋತ್ಸವದ ನಿಮಿತ್ತ ಎರಡು ದಿನಗಳ ಕಾಲ ನಡೆದ ಎಲ್ಲ ಸಭೆ, ಸಮಾರಂಭ, ಪ್ರಸಾದ ಮತ್ತಿತರ ಕಾರ್ಯಗಳಿಗೆ ಭಕ್ತರು ನೀಡಿದ ಸಹಕಾರವನ್ನು ನಾವೆಂದಿಗೂ ಮರೆಯುವಂತಿಲ್ಲ. ಈ ಶ್ರದ್ಧೆ ಭಕ್ತರಲ್ಲಿ ಎಂದಿಗೂ ಹೀಗೇ ಇರಲಿ ಎಂದು ಪ್ರಾರ್ಥಿಸಿದರು.

### ತಾಲೂಕಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಲಲಿತಾ ಸಿ.ಕೆರಿಮನಿ ಅಯ್ಕೆ

# ಮಹಿಳಾ ಸಾಹಿತ್ಯದ ಮುಕುಟ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಫೆ. 14ರಂದು ಲಕ್ಷ್ಮೇಶ್ವರ ತಾಲೂಕಿನ ಯಳವತ್ತಿ ಗ್ರಾಮದಲ್ಲಿ ನಡೆಯುತ್ತಿರುವ ಲಕ್ಷ್ಮೇಶ್ವರ ತಾಲೂಕಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಹಿರಿಯ ಸಾಹಿತಿ ಲಲಿತಾ ಸಿ.ಕೆರಿಮನಿ ಅಯ್ಕೆಯಾಗಿದ್ದಾರೆ.

ಸಾಹಿತಿ ಲಲಿತಾ ಸಿ.ಕೆರಿಮನಿ ಅವರು ಕಳೆದ 4 ದಶಕಗಳಿಂದ ಕನ್ನಡ ನಾಡು, ನುಡಿ, ಕಲೆ, ಸಂಸ್ಕೃತಿಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಸಮರ್ಪಣಾ ಮನೋಭಾವದ ಶಿಕ್ಷಕಿಯಾದ ಇವರು ಕನ್ನಡ ಸಾಹಿತ್ಯ ಲೋಕದಲ್ಲಿ, ಅದರಲ್ಲೂ ಮಹಿಳಾ ಸಾಹಿತ್ಯದಲ್ಲಿ ತಮ್ಮದೇ ಆದ ಛಾಪನ್ನು ಮೂಡಿಸಿದ್ದಾರೆ.

ಲಕ್ಷ್ಮೇಶ್ವರದ ಶ್ರೀಮತಿ ತಾಯಿ ಪಾರ್ವತಿ ಮಕ್ಕಳ ಬಳಗದ ಜಗದ್ಗುರು ಶ್ರೀ ರೇಣುಕಾಚಾರ್ಯ ಸಂಸ್ಕೃತ ಪಾಠಶಾಲೆಯ ಮುಖ್ಯೋಪಾಧ್ಯಾಯೆಯಾಗಿ 3 ದಶಕಗಳವರೆಗೆ ಕಾರ್ಯನಿರ್ವಹಿಸಿ, ನಿವೃತ್ತಿ



ನಂತರ ಸಾಹಿತ್ಯ ಕೃಷಿಯಲ್ಲಿ ತೊಡಗಿಸಿಕೊಂಡಿರುತ್ತಾರೆ. ಈಗಾಗಲೇ ಮಹಾತ್ಮಾ, ಶ್ರೀ ಶರೀಫರು, ಸಂಪದಾ, ಸುಭಾಷಿತ ಸ್ಮೃತಿ, ಸುಭಾಷಿತ ಚಿಂತನ, ಕಾಳಿದಾಸ, ನಾಟಕಗಳಲ್ಲಿ ಮಹಿಳೆಯ ಪಾತ್ರ, ಅಮೃತ ಪಾರ್ವತಿ, ಸಮಾನತೆ ಸಾರಿದ ವಚನಕಾರ್ತಿಯರು ಕೃತಿಗಳನ್ನು ರಚಿಸಿದ್ದಾರೆ.

ಅನೇಕ ದಿನಪತ್ರಿಕೆಗಳಲ್ಲಿ ಇವರ ಲೇಖನ, ಕವನಗಳು ಪ್ರಕಟಗೊಂಡಿವೆ. ಕರ್ನಾಟಕ ಸರ್ಕಾರದ ರಾಜ್ಯಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿ, ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ, ಕರ್ನಾಟಕ ಲೇಖಕಿಯರ ಸಂಘದ ವಿಶಿಷ್ಟ ಲೇಖಕಿ ಪ್ರಶಸ್ತಿ, ಸಾಹಿತ್ಯ ಸಿರಿ ಪ್ರಶಸ್ತಿ, ಕನ್ನಡಶ್ರೀ ಪ್ರಶಸ್ತಿ ಸೇರಿ ಹಲವಾರು ಸಂಘ-ಸಂಸ್ಥೆಗಳು ಇವರ ಶಿಕ್ಷಣ ಮತ್ತು ಸಾಹಿತ್ಯ ಸೇವೆಗಾಗಿ ಸನ್ಮಾನಿಸಿ ಗೌರವಿಸಿವೆ.

ಅನೇಕ ಕನ್ನಡ ಸಾಹಿತ್ಯ ಸಮ್ಮೇಳನ, ವಿಚಾರಗೋಷ್ಠಿ, ವಚನ ಕಮ್ಮಟಗಳಲ್ಲಿ ಪ್ರಬಂಧ ಮಂಡನೆ, ಕವಿಗೋಷ್ಠಿಗಳಲ್ಲಿ ಭಾಗವಹಿಸಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತು, ಶರಣ ಸಾಹಿತ್ಯ ಪರಿಷತ್ತು, ಕರ್ನಾಟಕ ವಿದ್ಯಾವರ್ಧಕ ಸಂಘ, ಕರ್ನಾಟಕ ಲೇಖಕಿಯರ ಸಂಘ, ಉತ್ತರ ಕರ್ನಾಟಕ ಲೇಖಕಿಯರ ಸಂಘ ಸೇರಿದಂತೆ ಅನೇಕ ಸಂಘ ಸಂಸ್ಥೆಗಳಲ್ಲಿ ಸದಸ್ಯರಾಗಿ ಕ್ರಿಯಾಶೀಲರಾಗಿ ತೊಡಗಿಸಿಕೊಂಡಿದ್ದಾರೆ. ಪ್ರಸ್ತುತ ಲಕ್ಷ್ಮೇಶ್ವರ ತಾಲೂಕು ಬರಹಗಾರರ ಬಳಗದ ಗೌರವಾಧ್ಯಕ್ಷರಾಗಿ, ಲಕ್ಷ್ಮೇಶ್ವರದ ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆಯ ಅಧ್ಯಕ್ಷರಾಗಿ ಪುಲಿಗೆರೆ ಪರಿಸರದಲ್ಲಿ ಸಾಹಿತ್ತಿಕ ಮತ್ತು ಸಾಂಸ್ಕೃತಿಕ ವಾತಾವರಣ ನಿರ್ಮಿಸಿದ್ದಾರೆ.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ದಿವಂಗತ ಪ್ರೊ ಸಿ.ವಿ. ಕೆರಿಮನಿಯವರ ಸಾಹಿತ್ಯ ಕೃಷಿಗೆ ಹೆಗಲಾಗಿ ಗ್ರಾಮಾಂತರ ಪ್ರದೇಶದಲ್ಲಿ ಸಾವಿರಾರು ವಿದ್ಯಾರ್ಥಿಗಳಿಗೆ ಜನಸಾಮಾನ್ಯರಿಗೆ ಸಾಹಿತ್ಯದ ಬಗ್ಗೆ ಆಸಕ್ತಿ, ಅಭಿರುಚಿ ಬೆಳಿಸಿದ್ದಾರೆ.

### ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಅಕ್ಕಿ ತೋಟೇಶ್ ನೇತೃತ್ವದಲ್ಲಿ ಮನವಿ

# ತಂಬ್ರಹಳ್ಳಿ ಹೋಬಳಿಯಲ್ಲಿ ಎರಡನೇ ಹಂತದ ನೀರಾವರಿ ಯೋಜನೆ ಜಾರಿಗೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ತಂಬ್ರಹಳ್ಳಿ ಹೋಬಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳು 1951-52ರಲ್ಲಿ ತುಂಗಭದ್ರಾ ಅಣೆಕಟ್ಟು ನಿರ್ಮಾಣದ ವೇಳೆ ಮನೆ ಹಾಗೂ ಕೃಷಿ ಭೂಮಿಗಳನ್ನು ಕಳೆದುಕೊಂಡು ಪುನರ್ವಸತಿಯಾಗಿ ಜೀವನ ನಡೆಸುತ್ತಿವೆ. ಈ ಭಾಗದ ರೈತರಿಗೆ ಸಮರ್ಪಕ ನೀರಾವರಿ ಸೌಲಭ್ಯ ಒದಗಿಸುವ ಉದ್ದೇಶದಿಂದ 1975ರಲ್ಲಿ ತಂಬ್ರಹಳ್ಳಿ ಏತ ನೀರಾವರಿ ಯೋಜನೆಯನ್ನು ಸುಮಾರು 3,000 ಎಕರೆ ಭೂಮಿಗೆ ಅನುಕೂಲವಾಗುವಂತೆ ಆರಂಭಿಸಲಾಗಿತ್ತು.


ಆದರೆ ಪ್ರಸ್ತುತ ಈ ಯೋಜನೆಯಿಂದ ಕೇವಲ 1,200 ಎಕರೆ ಭೂಮಿಗೆ ಮಾತ್ರ ನೀರಾವರಿ ಸೌಲಭ್ಯ ದೊರಕುತ್ತಿದ್ದು, ತುಂಗಭದ್ರಾ ನದಿ ಸಮೀಪದಲ್ಲೇ ಇದ್ದರೂ ತಂಬ್ರಹಳ್ಳಿ ಭಾಗದ ರೈತರಿಗೆ ಶೇಕಡಾ 25ರಿಂದ 30ರಷ್ಟು ಕೃಷಿಭೂಮಿಗೆ ನೀರಿನ ಪ್ರಯೋಜನ ಸಿಗುತ್ತಿಲ್ಲ.

ಪರಿಣಾಮವಾಗಿ ರೈತರು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ.

ಈ ಸಮಸ್ಯೆ ಪರಿಹಾರಕ್ಕಾಗಿ ರೈತರು ಹಲವಾರು ಬಾರಿ ಹೋರಾಟ ನಡೆಸಿದ್ದು, 29-02-2020ರಿಂದ ಸುತ್ತಮುತ್ತಲಿನ ಗ್ರಾಮಗಳ ರೈತರು ತಾಲೂಕು ಕೇಂದ್ರಕ್ಕೆ 18 ಕಿಲೋಮೀಟರ್ ದೂರ ಪಾದಯಾತ್ರೆ ಮಾಡಿ ಮೂರು ಬಾರಿ ಮನವಿ ಸಲ್ಲಿಸಿದ್ದಾರೆ. ಅಲ್ಲದೆ, 17-08-2022ರಂದು ಸುಮಾರು 1,000 ರೈತರು ಹೊಸಪೇಟೆ ಜಿಲ್ಲಾ ಕೇಂದ್ರಕ್ಕೆ 50 ಕಿಲೋಮೀಟರ್ ಪಾದಯಾತ್ರೆ ನಡೆಸಿ ಸರ್ಕಾರದ ಗಮನ ಸೆಳೆಯಲು ಪ್ರಯತ್ನಿಸಿದ್ದಾರೆ. ಆದರೆ ಇದುವರೆಗೂ ಯಾವುದೇ ಸ್ಪಷ್ಟ ಸ್ಪಂದನೆ ಲಭಿಸಿಲ್ಲ ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ತಂಬ್ರಹಳ್ಳಿ ಹಾಗೂ ಸುತ್ತಮುತ್ತಲಿನ ರೈತರು ಒಗ್ಗೂಡಿ ವಿಜಯಪುರದ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಅಭಿಯಂತರರಿಗೆ ಎರಡನೇ ಹಂತದ ನೀರಾವರಿ ಯೋಜನೆ ಜಾರಿಗೆ ತರಬೇಕೆಂದು ಮನವಿ ಪತ್ರ ಸಲ್ಲಿಸಿದ್ದಾರೆ. ಈ ಮನವಿ ಸಲ್ಲಿಕೆಗೆ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಅಕ್ಕಿ ತೋಟೇಶ್ ಅವರು ನೇತೃತ್ವ ವಹಿಸಿದ್ದರು.

# ಸೋಮೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಉತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಉತ್ಸವದ ನಿಮಿತ್ತ ಫೆ. 15ರಂದು ಶ್ರೀ ಸೋಮೇಶ್ವರ ದೇವಸ್ಥಾನ ಅರ್ಚಕರ ಸಮಿತಿಯವರು ಶ್ರೀ ಭಕ್ತರ ಸೇವಾ ಟ್ರಸ್ಟ್ ಕಮಿಟಿ, ಶ್ರೀ ಸೋಮೇಶ್ವರ ಜಾತ್ರಾ ಕಮಿಟಿ ಸಹಕಾರದಲ್ಲಿ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಫೆ. 15ರಂದು ಮುಂಜಾನೆಯಿಂದ ಜಲಾಭಿಷೇಕ ನಡೆಯಲಿದ್ದು, ರಾತ್ರಿ 10 ಗಂಟೆಗೆ ಸುಮಾರು 21 ಜನ ಋತ್ವಿಜರ ಮಂತ್ರಘೋಷಗಳೊಂದಿಗೆ ಲಘು ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ಕ್ಷೀರಾಭಿಷೇಕ ಮಹಾ ಮಂಗಳಾರತಿ ಜರುಗಲಿದೆ.

ಸಂಜೆ 5.30ರಿಂದ ನಡೆಯುವ ಕಾರ್ಯಕ್ರಮದಲ್ಲಿ ಶ್ರೀ ಸೋಮೇಶ್ವರ ದೇವಸ್ಥಾನದ ಅರ್ಚಕರ ಕಾರ್ಯಕಾರಿಣಿ ಸಮಿತಿಯ ಪದಗ್ರಹಣ ಸಮಾರಂಭ ನೆರವೇರಲಿದೆ. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಹೂವಿನಶಿಗ್ಗಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ವಹಿಸಲಿದ್ದು, ಅರ್ಚಕರ ಸಂಘದ ನೂತನ ಅಧ್ಯಕ್ಷ ದಿಗಂಬರ ಪೂಜಾರ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ತಹಸೀಲ್ದಾರ ಧನಂಜಯ ಎಂ ನೆರವೇರಿಸಲಿದ್ದಾರೆ. ಅತಿಥಿಗಳಾಗಿ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಅಧ್ಯಕ್ಷ ಗುರುರಾಜ ಪಾಟೀಲಕುಲಕರ್ಣಿ, ಜಾತ್ರಾ ಸಮಿತಿ ಅಧ್ಯಕ್ಷ ಕುಬೇರಪ್ಪ ಮಹಾಂತಶೆಟ್ಟರ, ಯುವ ಮುಖಂಡರಾದ ಆನಂದ ಗಡ್ಡದೇವರಮಠ, ಸುನೀಲ ಮಹಾಂತಶೆಟ್ಟರ, ಪಿಎಸ್‌ಐ ನಾಗರಾಜ ಗಡಾದ, ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಮುಂತಾದವರು ಉಪಸ್ಥಿತರಿರಲಿದ್ದಾರೆ.

ಶಿವರಾತ್ರಿ ಅಂಗವಾಗಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ, ಭರತನಾಟ್ಯ, ವಾದ್ಯರಹಿತ ಸಿತಾರವಾದನ, ಸೇರಿದಂತೆ ಅನೇಕ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ ಎಂದು ಅರ್ಚಕರ ಸಂಘದ ನೂತನ ಉಪಾಧ್ಯಕ್ಷ ರಾಘವೇಂದ್ರ ಪೂಜಾರ, ಕಾರ್ಯದರ್ಶಿ ಸಮೀರ ಪೂಜಾರ, ಖಜಾಂಚಿ ಕೃಷ್ಣ ಪೂಜಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಪ್ರಥಮ ಬಾರಿಗೆ ಹುಬ್ಬಳ್ಳಿಯ ಶಿವಾ ತಂಡದವರಿಂದ ಗಂಗಾರತಿ ಕಾರ್ಯಕ್ರಮ ನೆರವೇರಲಿರುವದು ವಿಶೇಷವಾಗಿದೆ.

# ಆಂಗ್ಲ ಭಾಷೆಯ ಮಹತ್ವ ಅರಿಯಿರಿ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಜಗತ್ತಿನಾದ್ಯಂತ ಇಂಗ್ಲೀಷ್ ಭಾಷೆಯು ಸಂಪರ್ಕ ಭಾಷೆಯಾಗಿ ಬಳಕೆಯಾಗುತ್ತಿರುವದರಿಂದ ಪ್ರಸ್ತುತ ಸಮಯದಲ್ಲಿ ಅತ್ಯಂತ ಮಹತ್ವದ ಭಾಷೆಯಾಗಿದೆ. ಇಂಗ್ಲೀಷ್ ಭಾಷೆಯ ಜ್ಞಾನವನ್ನು ಪಡೆದುಕೊಂಡು ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ಜನತಾ ವಿದ್ಯಾವರ್ಧಕ ಸಂಸ್ಥೆಯ ಅಧ್ಯಕ್ಷ ಐ.ಎನ್. ಕುಂಬಾರ ಸಲಹೆ ನೀಡಿದರು.

ಇಲ್ಲಿಯ ಜನತಾ ವಿದ್ಯಾವರ್ಧಕ ಸಂಸ್ಥೆಯ ಬಿ.ಎಚ್. ಪಾಟೀಲ ಪ.ಪೂ ಕಾಲೇಜಿನಲ್ಲಿ ಗದಗ ಜಿಲ್ಲಾ ಪದವಿಪೂರ್ವ ಆಂಗ್ಲ ಭಾಷಾ ಉಪನ್ಯಾಸಕರ ವೇದಿಕೆ ಹಾಗೂ ಬಿ.ಎಚ್. ಪಾಟೀಲ ಸಂಯುಕ್ತ ಪದವಿಪೂರ್ವ ಕಾಲೇಜಿನ ಸಂಯುಕ್ತ ಆಶ್ರಯದಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಇಂಗ್ಲೀಷ್ ವಿಷಯದ ಪ್ರಶ್ನೆ ಪತ್ರಿಕೆ ಬಿಡಿಸುವ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಇಂತಹ ಕಾರ್ಯಾಗಾರದ ಮಾಹಿತಿಯನ್ನು ಸದುಪಯೋಗಪಡಿಸಿಕೊಳ್ಳಬೇಕು. ಪರೀಕ್ಷೆಗಳು ಸಮೀಪಿಸುತ್ತಿರುವದರಿಂದ ವಿದ್ಯಾರ್ಥಿಗಳು ಒತ್ತಡಕ್ಕೆ ಒಳಗಾಗದೇ ಯೋಗ-ಧ್ಯಾನದಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಕಾರ್ಯಗಾರ ಉದ್ಘಾಟಿಸಿದ ಆಂಗ್ಲ ಭಾಷಾ ಉಪನ್ಯಾಸಕರ ವೇದಿಕೆಯ ಕಾರ್ಯದರ್ಶಿ ರಮಾಕಾಂತ ದೊಡ್ಡಮನಿ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಜಿಲ್ಲೆಯಾದ್ಯಂತ ಪ್ರಶ್ನೆ ಪತ್ರಿಕೆ ಬಿಡಿಸುವ ಕಾರ್ಯಾಗಾರಗಳನ್ನು ಹಮ್ಮಿಕೊಂಡಿದ್ದು, ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶವನ್ನು ಹೆಚ್ಚಿಸಲು ಕಾರ್ಯಾಗಾರಗಳು ಪರಿಣಾಮಕಾರಿಯಾಗಿವೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಚಾರ್ಯ ಬಿ.ವ್ಹಿ. ಪಾಟೀಲ, ಇಂಗ್ಲೀಷ್ ವಿಷಯದ ಪ್ರಶ್ನೆ ಪತ್ರಿಕೆ ಬಿಡಿಸುವ ಕಾರ್ಯಾಗಾರವನ್ನು ನಮ್ಮ ಸಂಸ್ಥೆಯಲ್ಲಿ ಏರ್ಪಡಿಸಿರುವದು ಸಂತಸ ತಂದಿದೆ. ಇಂಗ್ಲೀಷ್ ಕಠಿಣ ಎಂಬ ಭೀತಿ ಹೋಗಲಾಡಿಸುವ ಈ ಕಾರ್ಯಾಗಾರದ ಪ್ರಯೋಜನವನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ಪಡೆದುಕೊಳ್ಳಬೇಕೆಂದರು.

ಸಂಸ್ಥೆಯ ನಿರ್ದೇಶಕರಾದ ವ್ಹಿ.ವ್ಹಿ. ಗಂಧದ, ಪ್ರಾಚಾರ್ಯ ಈರಣ್ಣ ಕಮತರ, ಚೇತನ ಹೊಸಮನಿ ಮುಂತಾದವರು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಶಶಿಧರ ಕುರಿ ಹಾಗೂ ಮಲ್ಲಿಕಾರ್ಜುನ ಮಡಿವಾಳರ ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಂಡಿದ್ದರು. ಆರ್.ಎಸ್. ಚವಡಿ ಕಾರ್ಯಕ್ರಮ ನಿರೂಪಿಸಿದರು. ವಿನೋದ ತಳಗಡೆ ವಂದಿಸಿದರು.

# ಪೂರ್ವ ಪ್ರಾಥಮಿಕ ಶಾಲೆಗಳು ಮಕ್ಕಳ ಕಲಿಕೆಗೆ ಪೂರಕ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪೂರ್ವ ಪ್ರಾಥಮಿಕ ಶಾಲೆಗಳು ಮಕ್ಕಳ ಕಲಿಕೆಗೆ ಪೂರಕ ವಾತಾವರಣ ಕಲ್ಪಿಸುತ್ತವೆ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 1ರಲ್ಲಿ ಪೂರ್ವ ಪ್ರಾಥಮಿಕ ತರಗತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಈಗಾಗಲೇ ಸಾಕಷ್ಟು ಸರಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳು ಪ್ರಾರಂಭವಾಗಿದ್ದರಿಂದ ಪ್ರಾಥಮಿಕ ಹಂತದ ಮಕ್ಕಳ ದಾಖಲಾತಿಯಲ್ಲಿ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗುತ್ತಿವೆ. ಸರಕಾರಿ ಶಾಲೆಗಳಲ್ಲಿ ಸರಕಾರದ ಸಾಕಷ್ಟು ಸೌಲಭ್ಯಗಳನ್ನು ಹೊಂದಿದ್ದು, ಮಕ್ಕಳ ಗುಣಮಟ್ಟದ ಶಿಕ್ಷಣದ ಜೊತೆಯಲ್ಲಿ ನುರಿತ ಶಿಕ್ಷಕ ವೃಂದವನ್ನು ಹೊಂದಿದೆ. ಪಾಲಕರು ತಪ್ಪದೇ ಮಕ್ಕಳನ್ನು ಶಾಲೆಗೆ ಕಳುಹಿಸಿ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ ಮಾತನಾಡಿ, ಸರಕಾರಿ ಶಾಲೆಗಳಲ್ಲಿ ಕಲಿತ ಅದೆಷ್ಟೋ ವಿದ್ಯಾರ್ಥಿಗಳು ಸಾಧನೆ ಮಾಡಿದ್ದು, ಯಾವುದೇ ಹಿಂಜರಿಕೆಯಿಲ್ಲದೆ ನಿಮ್ಮ ಮಕ್ಕಳನ್ನು ಸರಕಾರಿ ಶಾಲೆಗೆ ಸೇರಿಸಿ ಎಂದರು.

ಅಕ್ಷರ ದಾಸೋಹ ನಿರ್ದೇಶಕ ಶಂಕರ ಹಡಗಲಿ ಮಾತನಾಡಿ, ಸರಕಾರಿ ಶಾಲೆಗಳಲ್ಲಿ ಪೌಷ್ಟಿಕ ಆಹಾರದ ಜೊತೆಯಲ್ಲಿ, ಮೊಟ್ಟೆ, ಹಾಲು, ಸಮವಸ್ತ್ರ, ಶೂ ಮತ್ತು ಸಾಕಸ ಸೌಲಭ್ಯಗಳನ್ನು ನೀಡುತ್ತಿದ್ದು, ಮಕ್ಕಳನ್ನು ಸರಕಾರಿ ಶಾಲೆಗಳಿಗೆ ಸೇರಿಸಿ ಎಂದರು.

ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಸ್.ಎಚ್. ಉಪ್ಪಾರ, ಎಂ.ಎಂ. ಮೇಗಲಮನಿ, ಕೆ.ಎಂ. ಹೆರಕಲ್, ಶಿಕ್ಷಕಿ ವಿದ್ಯಾ ಹಾಳಕೇರಿ, ಆಯಾ ರೂಪಾ ಬಗಾಡೆ ಇದ್ದರು.

# ಕಾಯಕ ಶರಣರ ಜಯಂತ್ಯುತ್ಸವ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಾಯಕ ಶರಣರ ಜಯಂತಿಯು ಸಮಾಜದಲ್ಲಿ ಶ್ರಮದ ಗೌರವವನ್ನು ಹೆಚ್ಚಿಸಲು ಮತ್ತು ಶರಣರ ವಿಚಾರಗಳನ್ನು ಪ್ರಸಾರ ಮಾಡಲು ಪ್ರೇರಣೆಯಾಗಿದೆ ಪೌರ ಸೇವಾ ನೌಕರರ ಜಿಲ್ಲಾಧ್ಯಕ್ಷ ರಮೇಶ ಹಲಗಿಯವರ ಹೇಳಿದರು.

ಪಟ್ಟಣ ಪಂಚಾಯಿತಿ ಸಭಾ ಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಕಾಯಕ ಶರಣರ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

12ನೇ ಶತಮಾನವು ಧಾರ್ಮಿಕ, ಸಾಮಾಜಿಕ, ರಾಜಕೀಯವಾಗಿ ಕ್ರಾಂತಿ ಉಂಟುಮಾಡಿದೆ. ಇವತ್ತಿನ ನಮ್ಮ ಸಂವಿಧಾನದ ಪಾರ್ಲಿಮೆಂಟ್ ಮಾದರಿಯಲ್ಲಿ ಅಂದಿನ ಅನುಭವ ಮಂಟಪ ಇತ್ತು. ಯಾರನ್ನೂ ಕೀಳಾಗಿ ಕಾಣಬಾರದು ಎಂಬುದು ಬಸವೇಶ್ವರರ ಸಮಾನತೆಯ ತತ್ವವಾಗಿದ್ದು, ಅವರ ಹಾದಿಯಲ್ಲಿ ನಡೆದ ಕಾಯಕ ಶರಣರಾದ ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ ಮತ್ತು ಉರಿಲಿಂಗ ಪೆದ್ದಿಯವರು ಶರಣ ಪಡೆಯ ಮಹನೀಯರಾಗಿದ್ದಾರೆ ಎಂದು ಹೇಳಿದರು.

ಎಂ.ಎಚ್. ಸೀತಿಮನಿ, ಎ.ವಿ. ಮೆಣಸಗಿ, ಶೇಖಪ್ಪ ಹೊನ್ನವಾಡ, ಮಹಾದೇವಪ್ಪ ಮ್ಯಾಗೇರಿ, ನಜ್ಮಾ ಬೇಲೇರಿ ಸೇರಿದಂತೆ ಪ.ಪಂ ಸಿಬ್ಬಂದಿಗಳು ಇದ್ದರು.

## ವಿಶೇಷ ಗ್ರಾಮ ಸಭೆಯಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ ಅಭಿಮತ

# ಗಾಂಧೀಜಿಯವರ ಗ್ರಾಮಸ್ವರಾಜ್ಯ ಕನಸು ನನಸಾಗಬೇಕು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಗ್ರಾಮ ಪಂಚಾಯತ್ ಆಡಳಿತ, ಆರ್ಥಿಕ ಪಾರದರ್ಶಕತೆ, ವಿಕೇಂದ್ರೀಕೃತ ಯೋಜನೆ ಮತ್ತು ಜನರ ಸಹಭಾಗಿತ್ವದೊಂದಿಗೆ ಗಾಂಧಿ ಕಂಡ ಗ್ರಾಮ ಸ್ವರಾಜ್ ಕನಸು ನನಸಾಗಬೇಕಿದೆ ಎಂದು ಮಾಜಿ ಶಾಸಕರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ್ ಆಶಿಸಿದರು.

ಸಮೀಪದ ಅಬ್ಬಿಗೇರಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಮಂಗಳವಾರ ನಡೆದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ ರಾಜ್ ಕಾಯ್ದೆ 1993ರ ಅಡಿಯಲ್ಲಿ ನಡೆದ ವಿಶೇಷ ಗ್ರಾಮ ಸಭೆಯಲ್ಲಿ ಅವರು ಮಾತನಾಡಿದರು.

ಇತ್ತೀಚೆಗೆ ಸಮಾಜದಲ್ಲಿನ ಯುವಕರು ಮತ್ತು ಗುರು-ಹಿರಿಯರಲ್ಲಿ ತಪ್ಪುಗಳನ್ನು ಖಂಡಿಸುವ ಗುಣ ಕಡಿಮೆಯಾಗುತ್ತಿದೆ. ಇದರಿಂದ, ಗ್ರಾಮದಲ್ಲಿನ ಸ್ವರಾಜ್ಯ ಕಲ್ಪನೆ ನನಸಾಗುತ್ತಿಲ್ಲ. ಜನರು ಜಾಗೃತರಾದಾಗ ಪಂಚಾಯತ ರಾಜ್ ಆಡಳಿತ ಸನ್ಮಾರ್ಗದಲ್ಲಿರುತ್ತದೆ. ವಾರ್ಡ್ ಸಭೆ, ಜನವಸತಿ ಸಭೆ ಗ್ರಾಮಸಭೆಗಳಲ್ಲಿ ಪಾಲ್ಗೊಳ್ಳಬೇಕು ಮತ್ತು ಇವುಗಳ ಮಹತ್ವ ತಿಳಿಯಬೇಕು. ಗ್ರಾಮ ಸಭೆಗಳ ನಿರ್ಣಯಗಳನ್ನು ತಿರಸ್ಕರಿಸುವ ಅಧಿಕಾರ ಯಾರಿಗೂ ಇಲ್ಲ. ಗ್ರಾಮ ಸಭೆಗಳಲ್ಲಿ ಭಾಗವಹಿಸಿ ಮುಂದಿನ ಐದು ವರ್ಷಗಳ ಆದ್ಯತೆ ಮತ್ತು ಫಲಾನುಭವಿಗಳ ಪಟ್ಟಿ ಸಿದ್ಧಪಡಿಸಿ ಯೋಗ್ಯರಿಗೆ ಸರಕಾರಿ ಲಾಭ ತಲುಪುವಂತೆ ಜನಸಾಮಾನ್ಯರು ಪ್ರಯತ್ನಿಸಬೇಕು. ಗ್ರಾಮ ನೈರ್ಮಲ್ಯಗಳಲ್ಲಿ ಪಾಲ್ಗೊಂಡು ಗಾಂಧಿ ಕನಸಿನಂತೆ ಗ್ರಾಮ ಸ್ವರಾಜ್ಯವನ್ನು ರಾಮರಾಜ್ಯ ಮಾಡಬೇಕಿದೆ ಎಂದು ಕರೆ ನೀಡಿದರು.

ರೋಣ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ್ ಪಾಟೀಲ ಮಾತನಾಡಿ, ಗ್ರಾಮಾಡಳಿತ ಎಂದರೆ ಸ್ಥಳೀಯ ಸರ್ಕಾರ. ಈ ಸ್ಥಳೀಯ ಸರ್ಕಾರಕ್ಕೆ ಹೆಚ್ಚಿನ ಅಧಿಕಾರವಿದೆ. ಪಂಚಾಯತ್‌ಗಳ ಕ್ರಿಯಾ ಯೋಜನೆ ಮತ್ತು ಪ್ರಗತಿಗಳಲ್ಲಿ ಜನರು ಸಕ್ರಿಯವಾಗಿ ಪಾಲ್ಗೊಳ್ಳುವುದರ ಜೊತೆಗೆ, ಗ್ರಾಮದ ಸ್ವಚ್ಛತೆಗೆ ಜಾಗೃತಿ ಮೂಡಿಸಬೇಕು. ಪ್ರತಿ ಮಾಸದಲ್ಲಿ ಒಂದು ದಿನ ಗ್ರಾಮದಲ್ಲಿ ಶ್ರಮದಾನದ ಮೂಲಕ ಜನರಲ್ಲಿ ಅರಿವು ಮೂಡಿಸಿ ಗಾಂಧಿಯವರ ಗ್ರಾಮ ಸ್ವರಾಜ್ ಮತ್ತು ಸ್ವಚ್ಛ ಭಾರತ ನಿರ್ಮಿಸಲು ಪ್ರಜ್ಞಾವಂತರು ಶ್ರಮಿಸಬೇಕು. ಸದ್ವಿಚಾರ, ಸದ್ಬೋಧನೆಗಳ ಮೂಲಕ ಗಾಂಧಿ ಕನಸನ್ನು ನನಸಾಗಿಸೋಣ. ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಪಾರದರ್ಶಕತೆ ಮತ್ತು ದಕ್ಷತೆಯನ್ನು ಹೆಚ್ಚಿಸುವ ಮೂಲಕ ವಿಕೇಂದ್ರೀಕೃತ ಯೋಜನೆ, ನೈಜ ಪ್ರಗತಿ ಮತ್ತು ಕೆಲಸ ಆಧಾರಿತ ಲೆಕ್ಕಪತ್ರ ನಿರ್ವಹಣೆಯನ್ನು ಬೆಂಬಲಿಸೋಣ ಎಂದು ಕರೆ ನೀಡಿದರು.

ರೋಣ ತಾ.ಪಂ ಇ.ಓ ಚಂದ್ರಶೇಕರ ಕಂದಕೂರ ಮಾತನಾಡಿ, ಗ್ರಾಮ ಪಂಚಾಯತ್‌ಗಳಲ್ಲಿ ಅಭಿವೃದ್ಧಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಜನರಿಗೆ ಅಧಿಕಾರವಿರುತ್ತದೆ. ಆಡಳಿತ ಸರಿಯಾಗಿ ನಡೆಸಿಕೊಂಡು ಹೋಗಲಾಗುತ್ತಿದೆಯೆ ಎಂದು ವೀಕ್ಷಿಸುವ ಮತ್ತು ಪ್ರಶ್ನಿಸುವ ಹಕ್ಕು ನಾಗರಿಕರಿಗೆ ಇದೆ. ಸ್ಥಳೀಯ ಆಡಳಿತ ಚಟುವಟಿಕೆಗಳಲ್ಲಿ ಭಾಗವಹಿಸುವ ಜವಾಬ್ದಾರಿ ಗ್ರಾಮಸ್ಥರಿಗಿದೆ. ಗ್ರಾಮದ ಸ್ವಚ್ಛತೆ ಬಗ್ಗೆ ಕಾಳಜಿವಹಿಸುವದು ಮತ್ತು ರಚನಾತ್ಮಕ ಸಲಹೆ ನೀಡುವದು ಕೂಡಾ ಜನರ ಆದ್ಯತೆ ಆಗಬೇಕಾಗಿದೆ ಎಂದು ಸಲಹೆ ನೀಡಿದರು.

ರಾಮಣ್ಣ ಬಸವರಡ್ಡೇರ, ಸುರೇಶ ಬಸವರಡ್ಡೇರ, ಬಸವರಾಜ ವೀರಾಪೂರ, ವಿ.ಬಿ. ಸೋಮನಕಟ್ಟಿಮಠ, ಸಿ.ಕೆ. ಮಾಳಶೆಟ್ಟಿ, ಬಸವರಾಜ ತಳವಾರ, ಪಿ.ಡಿ.ಓ ಲೋಹಿತ್ ಎಂ, ಲಲಿತಾ ರಾಥೋಡ, ಗುರಣ್ಣ ಅವರಡ್ಡಿ, ಎಚ್.ಡಿ. ದ್ವಾಸಲ, ಎಂ.ಕೆ. ಅಂಗಡಿ, ಶರಣಪ್ಪ ಮಾದಿನೂರ, ಮುತ್ತಪ್ಪ ಕುಕನೂರ, ಶಿವಪುತ್ರ ಕೆಂಗಾರ, ಸಿದ್ದು ಹನುಮನಾಳ, ಭರಮಪ್ಪ ಹನುಮನಾಳ, ರಾಮನಗೌಡ ಹಲಕುರ್ಕಿ, ಸುರೇಶ ಶಿರೋಳ ಮುಂತಾದವರು ಹಾಜರಿದ್ದರು.

## ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷೆ ಲಲಿತಾ ಕೆರಿಮನಿಯವರಿಗೆ ಆಹ್ವಾನ

# ತಾಲೂಕಿನ ಜನತೆಗೆ ಕೆರಿಮನಿ ಕುಟುಂಬ ಋಣಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಫೆ. 14ರಂದು ಲಕ್ಷ್ಮೇಶ್ವರ ತಾಲೂಕಿನ ಯಳವತ್ತಿ ಗ್ರಾಮದಲ್ಲಿ ನಡೆಯುತ್ತಿರುವ ಲಕ್ಷ್ಮೇಶ್ವರ ತಾಲೂಕಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾದ ಹಿರಿಯ ಸಾಹಿತಿ ಲಲಿತಾ ಸಿ.ಕೆರಿಮನಿ ಅವರನ್ನು ಮಂಗಳವಾರ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಕಾರಿ ಸಮಿತಿ ಮತ್ತು ಯಳವತ್ತಿ ಗ್ರಾಮದ ಹಿರಿಯರು ಅಧಿಕೃತವಾಗಿ ಸಮ್ಮೇಳನ ಸರ್ವಾಧ್ಯಕ್ಷತೆ ವಹಿಸಿಕೊಂಡು ಯಶಸ್ವಿಗೊಳಿಸುವಂತೆ ಆಮಂತ್ರಿಸಿದರು.

ಈ ವೇಳೆ ಮಾತನಾಡಿದ ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ, ಪುಲಿಗೆರೆ ತಿರುಳ್ಗನ್ನಡ ನಾಡಿನಲ್ಲಿ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಕೆರಿಮನಿ ಕುಟುಂಬದ ಕೊಡುಗೆ ಸ್ಮರಣೀಯ. ಕಸಾಪ ಗದಗ ಜಿಲ್ಲಾ ಮಾಜಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾಗಿದ್ದ ಹಿರಿಯ ಸಾಹಿತಿ ದಿ. ಪ್ರೊ. ಸಿ.ವಿ. ಕೆರಿಮನಿ ಅವರ ಧರ್ಮಪತ್ನಿ ಲಲಿತಾ ಕೆರಿಮನಿಯವರು 4 ದಶಕಗಳಿಂದ ಕನ್ನಡ ಸಾಹಿತ್ಯದ ವಿವಿಧ ಮಜಲು, ವಿಭಾಗದಲ್ಲಿ ಸಲ್ಲಿಸಿದ ಸೇವೆ ಮಹಿಳಾ ರಂಗದಲ್ಲಿ ಜಿಲ್ಲೆಯಲ್ಲಿ ಅಗ್ರಪಂಕ್ತಿಗೆ ಸೇರುತ್ತದೆ. ಗದಗ ಜಿಲ್ಲೆಯಲ್ಲಿ ನಡೆದ ತಾಲೂಕಾ ಮಟ್ಟದ ಸಾಹಿತ್ಯ ಸಮ್ಮೇಳನದಲ್ಲಿ ಸಮ್ಮೇಳನದ ಸರ್ವಾಧ್ಯಕ್ಷ ಸ್ಥಾನಕ್ಕೆ ಮಹಿಳೆಯರಿಗೆ ಪ್ರಾಧಾನ್ಯತೆ ನೀಡಿ ಒಮ್ಮತದ ಆಯ್ಕೆ ಮಾಡಿರುವುದು ಸಂತಸದ ಸಂಗತಿ. ಎಲ್ಲ ಕನ್ನಡ ಮನಸ್ಸುಗಳು ಒಗ್ಗಟ್ಟಿನಿಂದ ಒಂದಾಗಿ ಚಂದಾಗಿ ಸಮ್ಮೇಳನ ಯಶಸ್ವಿಗೊಳಿಸೋಣ. ಯಳವತ್ತಿ ಗ್ರಾಮಸ್ಥರು ಸಮ್ಮೇಳನದ ಯಶಸ್ವಿಗಾಗಿ ಕಂಕಣಬದ್ಧರಾಗಿದ್ದು ಅವರಿಗೆ ಸಹಕಾರ ನೀಡೋಣ ಎಂದರು.

ಆಹ್ವಾನ ಸ್ವೀಕರಿಸಿದ ಸಮ್ಮೇಳನಾಧ್ಯಕ್ಷೆ ಲಲಿತಕ್ಕ ಕೆರಿಮನಿ ಮಾತನಾಡಿ, ಕಸಾಪ ಕಾರ್ಯಕಾರಿ ಮತ್ತು ಯಳವತ್ತಿ ಗ್ರಾಮಸ್ಥರು ನನ್ನ ಕನ್ನಡ ತಾಯಿ ಅಳಿಲು ಸೇವೆ ಪರಿಗಣಿಸಿ ದೊಡ್ಡ ಸ್ಥಾನವನ್ನು ನೀಡಿರುವದು ನನ್ನ ಭಾಗ್ಯವಾಗಿದೆ. ತಾಲೂಕಿನ ಜನತೆ, ಕನ್ನಡದ ಮನಸ್ಸುಗಳಿಗೆ ಕೆರಿಮನಿ ಕುಟುಂಬ ಸದಾ ಋಣಿಯಾಗಿರುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಿರಿಯ ಸಾಹಿತಿಗಳಾದ ಸಿ.ಜಿ. ಹಿರೇಮಠ, ಮಹಾದೇವಪ್ಪ ಕೊತ್ತಲ, ಡಿ.ಬಿ. ಬಳಿಗಾರ, ಆರ್.ಎಫ್. ರಿತ್ತಿ, ಶಂಕರಗೌಡ ನಿಂಗನಗೌಡ್ರ, ಆರ್.ಎಫ್. ಅಜ್ಜನಗೌಡ್ರ, ಎಫ್.ಎ. ಪಾಟೀಲ, ಎಸ್.ಎಫ್. ಕೊಡ್ಲಿ, ಎಂ.ಬಿ. ಪಾಟೀಲ, ಆರ್.ಎಸ್. ಗಾಣಗೇರ, ವಿ.ಎಂ. ಮೇಟಿ, ಮಹಾರುದ್ರಪ್ಪ ಶಿರಬಡಗಿ, ಮುತ್ತಣ್ಣ ನವಲಗುಂದ, ಎಸ್.ಎಮ್. ಗಾಣಗೇರ, ಎಸ್.ಎನ್. ಮಳಲಿ, ಮಂಜುನಾಥ ಕೊಕ್ಕರಗುಂದಿ, ಎಸ್.ಬಿ. ಅಣ್ಣಿಗೇರಿ, ಮಂಜುನಾಥ ಚಾಕಲಬ್ಬಿ, ಎಸ್.ಬಿ. ಸೊಪ್ಪಿನ, ಎಸ್.ವಿ. ಕನೋಜ, ವೀರಣ್ಣ ಅಕ್ಕೂರ, ರತ್ನಾ ಕರ್ಕಿ, ಅಶ್ವಿನಿ ಅಂಕಲಕೋಟಿ, ಸೋಮಶೇಖರ ಕೆರಿಮನಿ, ಈರಣ್ಣ ಗಾಣಗೇರ ಮುಂತಾದವರು ಹಾಜರಿದ್ದರು.

# ಜೆಡಿಎಸ್ ಜಿಲ್ಲಾ ಅಧ್ಯಕ್ಷರಾಗಿ ಬಾದಾಮಿ ಮೃತ್ಯುಂಜಯ ನೇಮಕ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಜಾತ್ಯತೀತ ಜನತಾದಳ (ಜೆಡಿಎಸ್) ವಿಜಯನಗರ ಜಿಲ್ಲಾ ಅಧ್ಯಕ್ಷರಾಗಿ ಬಾದಾಮಿ ಮೃತ್ಯುಂಜಯ (ಮುತ್ತಣ್ಣ) ಅವರನ್ನು ಆಯ್ಕೆ ಮಾಡಲಾಗಿದೆ. ಅವರು ತಾಲೂಕಿನಲ್ಲಿ ಯುವ ಮುಖಂಡರಾಗಿಯೂ, ಹಗರಿಬೊಮ್ಮನಹಳ್ಳಿ ತಾಲೂಕು ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ.



ವಿಜಯನಗರ ಜಿಲ್ಲೆಯ ಜೆಡಿಎಸ್ ಜಿಲ್ಲಾ ಅಧ್ಯಕ್ಷರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ನೇಮಿರಾಜ ನಾಯ್ಕ ಅವರು ಅಭಿನಂದನೆಗಳನ್ನು ತಿಳಿಸಿದ್ದಾರೆ.

ಇದಲ್ಲದೆ, ಜೆಡಿಎಸ್ ತಾಲೂಕು ಅಧ್ಯಕ್ಷರಾದ ವೈ. ಮಲ್ಲಿಕಾರ್ಜುನ್ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಬಾದಾಮಿ ಮೃತ್ಯುಂಜಯ (ಮುತ್ತಣ್ಣ) ಅವರಿಗೆ ಶುಭಾಶಯಗಳನ್ನು ಕೋರಿದ್ದಾರೆ.

# ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ದೇಶದ ಪ್ರತಿಯೊಂದು ಮಗುವನ್ನು ಜಂತುಹುಳು ಮುಕ್ತಗೊಳಿಸಲು ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ರಾಷ್ಟ್ರೀಯ ಜಂತುಹುಳು ನಿವಾರಣಾ ದಿನವನ್ನು ಪ್ರಾರಂಭಿಸಿದೆ ಎಂದು ನರೇಗಲ್ಲನ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಎ.ಡಿ. ಸಾಮುದ್ರಿ ಹೇಳಿದರು.

ಪಟ್ಟಣದ ಶ್ರೀ ಬಸವೇಶ್ವರ ಕನ್ನಡ ಮಾಧ್ಯಮ ಶಾಲೆಯಲ್ಲಿ ಸಮುದಾಯ ಆರೋಗ್ಯ ಕೇಂದ್ರದ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಇದು ಕಡಿಮೆ ಅವಧಿಯಲ್ಲಿ ಹೆಚ್ಚಿನ ಸಂಖ್ಯೆಯ ಮಕ್ಕಳನ್ನು ತಲುಪುವ ಅತಿದೊಡ್ಡ ಸಾರ್ವಜನಿಕ ಆರೋಗ್ಯ ಕಾರ್ಯಕ್ರಮಗಳಲ್ಲಿ ಒಂದಾಗಿದೆ. ಈ ಕಾರ್ಯಕ್ರಮವನ್ನು ರಾಜ್ಯವು 2015ರಿಂದ ಜಾರಿಗೊಳಿಸುತ್ತಿದೆ. ಮಲದಿಂದ ಕಲುಷಿತಗೊಂಡ ಮಣ್ಣಿನ ಮೂಲಕ ಹರಡುವ ಹೆಲ್ಮಿಂತ್‌ಗಳನ್ನು (ಹುಳುಗಳು) ಮಣ್ಣಿನಿಂದ ಹರಡುವ ಹೆಲ್ಮಿಂತ್‌ಗಳು (ಕರುಳಿನ ಪರಾವಲಂಬಿ ಹುಳುಗಳು) ಎಂದು ಕರೆಯಲಾಗುತ್ತದೆ. ಮಣ್ಣಿನಿಂದ ಹರಡುವ ಹೆಲ್ಮಿಂತ್‌ಗಳ ಸೋಂಕು ರಕ್ತಹೀನತೆ, ಅಪೌಷ್ಟಿಕತೆ, ದುರ್ಬಲ ದೈಹಿಕ, ಮಾನಸಿಕ ಮತ್ತು ಅರಿವಿನ ಬೆಳವಣಿಗೆ ಮತ್ತು ಕಡಿಮೆ ಶಾಲಾ ಭಾಗವಹಿಸುವಿಕೆಗೆ ಕಾರಣವಾಗಬಹುದು ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಮಂಜುನಾಥ ಜಾಲಿಹಾಳ ಮಾತನಾಡಿ, ರಾಷ್ಟ್ರೀಯ ಜಂತುಹುಳು ನಿವಾರಣಾ ದಿನದ ಉದ್ದೇಶವೆಂದರೆ, 1ರಿಂದ 19 ವರ್ಷ ವಯಸ್ಸಿನ ಎಲ್ಲಾ ಮಕ್ಕಳಿಗೆ (ಶಾಲೆಗೆ ದಾಖಲಾಗಿರುವ ಮತ್ತು ದಾಖಲಾಗದ) ಶಾಲೆಗಳು ಮತ್ತು ಅಂಗನವಾಡಿ ಕೇಂದ್ರಗಳ ವೇದಿಕೆಯ ಮೂಲಕ ಜಂತುಹುಳು ನಿವಾರಣಾ ಮಾತ್ರೆಗಳನ್ನು ಹಾಕುವುದಾಗಿದೆ. ಇದರಿಂದಾಗಿ ಅವರ ಒಟ್ಟಾರೆ ಆರೋಗ್ಯ, ಪೌಷ್ಟಿಕಾಂಶದ ಸ್ಥಿತಿ, ಶಿಕ್ಷಣದ ಲಭ್ಯತೆ ಮತ್ತು ಜೀವನದ ಗುಣಮಟ್ಟವನ್ನು ಸುಧಾರಿಸಲಾಗುತ್ತದೆ ಎಂದರು. ಮುಖ್ಯ ಶಿಕ್ಷಕಿ ಭಾರತಿ ಶಿರಸಿ, ವಿಜಯಲಕ್ಷ್ಮೀ ಜಾದವ, ಸುವರ್ಣ ಹಿರೇಮಠ, ರಹಮತ ಬಾನು ಶರಬತ್‌ವಾಲಾ, ವಿಜಯಲಕ್ಷ್ಮೀ ಪೊಲೀಸ್‌ಪಾಟೀಲ, ಸಂಗೀತ ಮುಚ್ಚಂಡಿ, ಕೆ.ಎ. ಬೂದಿಹಾಳ ಇದ್ದರು.

## ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಮಹಾಶಿವರಾತ್ರಿ ಜಾತ್ರಾ ಮಹೋತ್ಸವ

# ಮೂರು ದಿನಗಳವರೆಗೆ ಶಿವಾರಾಧನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಮಹಾಶಿವರಾತ್ರಿ ಜಾತ್ರಾ ಮಹೋತ್ಸವದ ಅಂಗವಾಗಿ ಫೆ. 15ರಿಂದ 17ರವರೆಗೆ 3 ದಿನಗಳ ಕಾಲ ಲೋಕೋತ್ತರ ಶಿವಪೂಜೆ, ವಿಶೇಷ ಶಿವಲಿಂಗ ಪೂಜೆ, ಲಿಂಗದೀಕ್ಷೆ, ರಥೋತ್ಸವ, ಧಾರ್ಮಿಕ ಕಾರ್ಯಕ್ರಮಗಳು, ಧರ್ಮಜಾಗೃತಿ ಸಮಾರಂಭ ಜರುಗಲಿದೆ ಎಂದು ಮುಕ್ತಿಮಂದಿರದ ಪಟ್ಟಾಧ್ಯಕ್ಷರು ಹಾಗೂ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರೂ ಆಗಿರುವ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರ ಸ್ವಾಮಿಗಳು ತಿಳಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಶ್ರೀಗಳು, ಪ್ರತಿವರ್ಷದಂತೆ ಶ್ರೀ ಕ್ಷೇತ್ರದಲ್ಲಿ ಮಹಾಶಿವರಾತ್ರಿಯ ನಿಮಿತ್ತ ವಿವಿಧ ಕಾರ್ಯಕ್ರಮಗಳು ಜರುಗಲಿದ್ದು, ಫೆ. 15ರಂದು ಪ್ರಾತಃಕಾಲ ಶ್ರೀ ಜಗದ್ಗುರು ಪಂಚಾಚಾರ್ಯ ಧ್ವಜಾರೋಹಣ, ಲಿಂ. ವೀರಗಂಗಾಧರ ಜಗದ್ಗುರುಗಳ ಗದ್ದುಗೆಗೆ ಮಹಾರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಮಹಾಮಂಗಳಾರತಿ ಜರುಗಲಿದೆ.

ಬೆಳಿಗ್ಗೆ 9ಕ್ಕೆ ಶಿವದೀಕ್ಷೆ, ಅಯ್ಯಾಚಾರ ಜರುಗುವುದು. ಸಂಜೆ 5ಕ್ಕೆ ಜ. ಪಂಡಿತಾರಾಧ್ಯರ ಮತ್ತು ವಿಶ್ವಾರಾಧ್ಯರ ಜಯಂತಿ ನಿಮಿತ್ತ ರಥೋತ್ಸವ ಜರುಗುವುದು. ರಾತ್ರಿ ಮಾನವ ಧರ್ಮಮಂಟಪದಲ್ಲಿ ಜ.ರೇಣುಕಾಚಾರ್ಯರು, ಶ್ರೀ ಜಗದ್ಗುರುಗಳವರ ಮಂಗಳಮೂರ್ತಿಗೆ ಮಹಾರುದ್ರಾಭಿಷೇಕ, ಪಟ್ಟಾಧ್ಯಕ್ಷರ ಸಡಗರದ ಮಹಾಶಿವಪೂಜೆ ಜರುಗಲಿದೆ. ಫೆ. 16ಕ್ಕೆ ವಿಶೇಷ ಪೂಜಾ ಕಾರ್ಯಕ್ರಮ, ಸಂಜೆ ಶಿವ-ಪಾರ್ವತಿ ಮಹಾರಥೋತ್ಸವ, ಧರ್ಮಸಭೆ ನಡೆಯಲಿದೆ.

ಫೆ. 17ರಂದು ಮಹಾಶಿವರಾತ್ರಿ ಅಮವಾಸ್ಯೆ ವೃತಾಚರಣೆ, ಬೆಳಿಗ್ಗೆ ಶ್ರೀ ರಂಭಾಪುರಿ ಜಗದ್ಗುರುಗಳ ಕರ್ತೃ ಗದ್ದುಗೆಗೆ ಮಹಾಪೂಜಾ ಕೈಂಕರ್ಯಗಳು, ಮಧ್ಯಾಹ್ನ 12ಕ್ಕೆ ಸುಲ್ತಾನಪುರ ಗ್ರಾಮಸ್ಥರಿಂದ ವಿಶ್ವಶಕ್ತಿ ಭಾವಚಿತ್ರದ ಮೆರವಣಿಗೆ. 3ಕ್ಕೆ ಲಿಂ. ಜ.ವೀರಗಂಗಾಧರರ ಮಹಾಮಂಗಲ ಮೂರ್ತಿಯ ಅಡ್ಡಪಲ್ಲಕ್ಕಿ ಮಹೋತ್ಸವ, ಕಡುಬಿನ ಕಾಳಗ, ಅನ್ನದ ಹೊಳೆ-ಹೊನ್ನಿನ ಮಳೆ ಜರುಗುವುದು.

ಸಂಜೆ 5ಕ್ಕೆ ಮುಕ್ತಿಮಂದಿರ ಕ್ಷೇತ್ರದಲ್ಲಿ ಬಾಳೇಹೊನ್ನೂರ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ದಿವ್ಯಸಾನ್ನಿಧ್ಯದಲ್ಲಿ ಮಹಾಶಿವರಾತ್ರಿ ಧರ್ಮ ಜಾಗೃತಿ ಸಮಾರಂಭ ಜರುಗಲಿದೆ. ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ನೇತೃತ್ವದಲ್ಲಿ ಹಾಗೂ ನೊಣವಿನಕೆರೆ ಶ್ರೀಗಳ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ಜರುಗಲಿದ್ದು, ಬಂಕಾಪೂರ ಅರಳೆಲೆಹಿರೇಮಠದ ಶ್ರೀ ರೇವಣಸಿದ್ಧೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಸಮ್ಮುಖ ವಹಿಸುವರು. ನಾಡಿನ ಹರಗುರುಚರಮೂರ್ತಿಗಳು, ಮಂತ್ರಿಗಳು, ಶಾಸಕರು, ಗಣ್ಯಮಾನ್ಯರು ಸೇರಿ ಅಪಾರ ಭಕ್ತಸಮೂಹ ಪಾಲ್ಗೊಳ್ಳಲಿದೆ ಎಂದು ಪಟ್ಟಾಧ್ಯಕ್ಷರು ತಿಳಿಸಿದ್ದಾರೆ.

ಮುಕ್ತಿಮಂದಿರ ಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗ ಸ್ಥಾಪನೆ ಕಾರ್ಯ ಭರದಿಂದ ಸಾಗಿದ್ದು, ಮುಂದಿನ ದಿನಗಳಲ್ಲಿ ಈ ಕ್ಷೇತ್ರ ಭಾರತದ ಯಾತ್ರಾ ಸ್ಥಳಗಳಲ್ಲಿ ಒಂದಾಗಿ ಬೆಳಗಲಿದೆ. ಶಿವಲಿಂಗ ಸ್ಥಾಪನೆಗೆ ಹಾಗೂ ಕ್ಷೇತ್ರದಲ್ಲಿ ನಿತ್ಯ ನಿರಂತರವಾಗಿ ನಡೆಯುವ ದಾಸೋಹಕ್ಕೆ ಸೇವೆ ಸಲ್ಲಿಸುವ ಮೂಲಕ ಭಕ್ತಿಕಾರ್ಯದಲ್ಲಿ ಕೈಗೂಡಬೇಕು ಎಂದು ಶ್ರೀಗಳು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ
**ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕ ಪಂಚಾಯತ ರೋಣ**
ಮೊಬೈಲ್ : 9480865110 ಇ-ಮೇಲ್ : adtpron@gmail.com
ಕ್ರಸಂ:ತಾಪಂರೋ/ಲೆಕ್ಕಶಾಖೆ/ಅನಿರ್ಬಂಧಿತ/ವಹಿ/2025-26
ದಿನಾಂಕ : 09-02-2026

**ಕೆಪಿಪಿ ಪೋರ್ಟಲ್ ಮೂಲಕ ಟೆಂಡರ ಪ್ರಕಟಣೆ**
**Standard Bid Document KW-1 [ದ್ವಿ ಲಕೋಟೆ ಪದ್ಧತಿ]**

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತ ರೋಣ ಇವರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದ್ಯಾದೇಶ 1999-2000 ಪ್ರಕಾರ ಪಾರದರ್ಶಕತೆ ಆ್ಯಕ್ಟ್ 2000 ನಿಯಮದಂತೆ Standard Bid Document KW-1 ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ ಈ ಕೆಳಗೆ ನಮೂದಿಸಿದ ಮಂಜೂರಾದ ಕಾಮಗಾರಿಗಳಿಗೆ, ಲೆಕ್ಕ ಶೀರ್ಷಿಕೆ: 2515-00-102-0-62 (059) 2025-26 ನೇ ಸಾಲಿನ ತಾಲೂಕ ಪಂಚಾಯತ ಅನಿರ್ಬಂದಿತ ಅನುದಾನ ಯೋಜನೆ ಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಅರ್ಹ ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು.

Indent-Nos: RDPR/2025-26/IND13475 (Rs. **11.45** Lakhs)
ಟೆಂಡರಿಗಿಟ್ಟ ಮೊತ್ತ ರೂ. **11.45** ಲಕ್ಷ

**ಸಾಮಾನ್ಯ ಸೂಚನೆಗಳು** : (1) ಇ-ಪೋರ್ಟಲ್ ಮೂಲಕ ಮಾಹಿತಿ ಮತ್ತು ಸ್ಪಷ್ಟೀಕರಣ ಕೇಳಲು ಕೊನೆಯ ದಿನಾಂಕ : **11-02-2026** ಸಾಯಂಕಾಲ 4.30 ಗಂಟೆಯವರೆಗೆ (2) ಇ-ಪೋರ್ಟಲ್ ಮೂಲಕ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : **17-01-2026** ಸಾಯಂಕಾಲ 4.30 ಗಂಟೆಯವರೆಗೆ (3) ತಾಂತ್ರಿಕ ಬಿಡ್ ತೆರೆಯುವ ದಿನಾಂಕ : **18-01-2026** ಮಧ್ಯಾಹ್ನ 04.30 ಗಂಟೆಗೆ (4) ಆರ್ಥಿಕ ಬಿಡ್ ತೆರೆಯುವ ದಿನಾಂಕ : **19-01-2026** ಸಾಯಂಕಾಲ 4.30 ಗಂಟೆಗೆ ಹಾಗೂ ಯಾವುದೇ ಬಿಡ್ ನಿಗದಿತ ದಿನಾಂಕದ ಒಳಗಡೆ ಸಲ್ಲಿಕೆಯಾಗದಿದ್ದಲ್ಲಿ 3 ದಿನಗಳ ಸ್ವಯಂ ಚಾಲಿತವಾಗಿ ದಿನಾಂಕ ವಿಸ್ತರಣೆಯಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತ ರೋಣ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ **9480865110** ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂದಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

**ಸಹಿ/- ಕಾರ್ಯನಿರ್ವಾಹಕ ಅಧಿಕಾರಿಗಳು,**
ವಾಸಾಸಂಇ/ಗದಗ/ಕೆಎಸ್‌ಎಂಸಿಎ/646/25-26 **ತಾಲೂಕ ಪಂಚಾಯತ, ರೋಣ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka